ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸ ಪತ್ರಿಕೆ

ಸಂಪುಟ : 4 । ಸಂಚಿಕೆ : 12 । ಡಿಸೆಂಬರ್- 2022 । ಪುಟಗಳು : 20 । ಬೆಲೆ : 25/-

## 69ನೇ ಸಹಕಾರ ಸಪ್ತಾಹ: ಮೈಸೂರಿನಲ್ಲಿ ಸಮಾರೋಪ ಸಮಾರಂಭ



## ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರು







ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ.ಮಹೇಂದ್ರಪ್ರಸಾದ್ ಗೌಡ, ಹಾಗೂ ನಿರ್ದೇಶಕರುಗಳಾದ ಶ್ರೀ ಡಿ.ಚನ್ನಯ್ಯ, ಶ್ರೀ ಜಿ.ಮಲ್ಲಿಕಾರ್ಜುನಯ್ಯ ಅವರುಗಳು 2022ರ "ಸಹಕಾರ ರತ್ನ" ಪುರಸ್ಕೃತರಾಗಿದ್ದಾರೆ.

## ಸಹಕಾರ ರತ್ನ ಪ್ರಶಸ್ತಿ ಗೌರವ–ಅಭಿನಂದನೆ ಸಲ್ಲಿಕೆ




ಬೆಂಗಳೂರು: ದಿ:19.11.2022ರಂದು ಗಣೇಶ ಮೈದಾನ, ಕೆಂಗೇರಿ ಉಪನಗರ, ಇಲ್ಲಿ ನಡೆದ 69ನೇ ಅಖಿಲ ಭಾರತ ಸಹಕಾರ ಸಪ್ತಾಹದಲ್ಲಿ ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ.ಮಹೇಂದ್ರಪ್ರಸಾದ್ ಗೌಡ ಹಾಗೂ ನಿರ್ದೇಶಕರುಗಳಾದ ಶ್ರೀ ಡಿ.ಚನ್ನಯ್ಯ ಹಾಗೂ ಶ್ರೀ ಜಿ.ಮಲ್ಲಿಕಾರ್ಜುನಯ್ಯರವರಿಗೆ "ಸಹಕಾರ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.



## ಪತ್ತಿನ ಸಹಕಾರ ಮಹಾಮಂಡಳದಲ್ಲಿ ಸಹಕಾರ ಧ್ವಜಾರೋಹಣ

69ನೇ ಅಖಿಲ ಭಾರತ ಸಹಕಾರ ಸಪ್ತಾಹದ ಅಂಗವಾಗಿ ಪತ್ತಿನ ಮಹಾಮಂಡಳದ ಕಛೇರಿಯಲ್ಲಿ ನವೆಂಬರ್–14ರಂದು ಬೆಳಗ್ಗೆ ಸಹಕಾರ ಧ್ವಜಾರೋಹಣವನ್ನು ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ. ಮಹೇಂದ್ರಪ್ರಸಾದ್ ಗೌಡರವರು ನೆರವೇರಿಸಿದರು. ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಡಾ॥ ಸಂಜಯ ಪಿ ಹೊಸಮಠ ಮತ್ತು ಶ್ರೀ ಡಿ.ಚನ್ನಯ್ಯರವರು ಹಾಗೂ ಸಿಬ್ಬಂದಿಗಳು ಹಾಜರಿದ್ದರು. ಈ ಸಂದರ್ಭದಲ್ಲಿ ನಾಡಿನ ಸಮಸ್ತ ಸಹಕಾರ ಪತ್ತಿನ ಸಂಘಗಳಿಗೆ ಹಾಗೂ ಸಹಕಾರಿಗಳಿಗೆ ಮಹಾಮಂಡಳದ ವತಿಯಿಂದ ಸಹಕಾರ ಸಪ್ತಾಹದ ಶುಭಾಶಯಗಳನ್ನು ಕೋರಲಾಯಿತು.

# ಶಿಕ್ಷಣ ವಂತಿಗೆ ಸಲ್ಲಿಕೆ



ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖಾ ನೌಕರರ ಪತ್ತಿನ ಸಹಕಾರ ಸಂಘ ನಿ. ಬೆಂಗಳೂರು ಇದರ ನಿರ್ದೇಶಕರು ಹಾಗೂ ಪತ್ತಿನ ಮಹಾಮಂಡಳದ ನಿರ್ದೇಶಕರು ಆದ ಶ್ರೀ ಹೆಚ್.ಟಿ.ನಾಗೇಶ್‌ರವರು ಹಾಗು ಸಂಘದ ಸಿಬ್ಬಂದಿಯವರು ಪತ್ತಿನ ಮಹಾಮಂಡಳದ ಅಧ್ಯಕ್ಷರಾದ ಶ್ರೀಮತಿ ಕೆ.ಲಲಿತ ಜಿ.ಟಿ.ದೇವೇಗೌಡ, ಉಪಾಧ್ಯಕ್ಷರಾದ ಶ್ರೀ ಕೆ.ಕೆ.ಮಹೇಂದ್ರಪ್ರಸಾದ್ ಗೌಡರವರಿಗೆ ಶಿಕ್ಷಣ ಚಟುವಟಿಕೆಗಳಿಗೆ ವಂತಿಗೆ ಚೆಕ್ಕನ್ನು ನೀಡಿದರು. ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರ) ಆಶಾಲತಾ.ಪಿ ರವರು ಉಪಸ್ಥಿತರಿದ್ದರು.

## ಜಾಹಿರಾತು ಮನವಿ




ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಮಾಸಿಕ ಸಹಕಾರ ಪತ್ರಿಕೆಯನ್ನು ಪ್ರಕಟ ಮಾಡುತ್ತಿದ್ದು, ಪತ್ತಿನ ಸಹಕಾರ ಚಳವಳಿಯ ಪೂರಕ ಚಟುವಟಿಕೆಗಳಿಗೆ ಪ್ರಚಾರ ನೀಡುತ್ತಾ ಬರುತ್ತಿದೆ. ರಾಜ್ಯದ ಪತ್ತಿನ ಸಹಕಾರ ಸಂಘಗಳು ತಮ್ಮ ಕಾರ್ಯಪ್ರಗತಿಯ ವಿವರಗಳನ್ನು ಜಾಹಿರಾತು ಮೂಲಕ ಪ್ರಕಟಿಸಿದ್ದಲ್ಲಿ ಉತ್ತಮ ಪ್ರಚಾರ ಪಡೆದುಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಪತ್ತಿನ ಸಹಕಾರ ಸಂಘಗಳ ಮಹಾಮಂಡಳವು ರಿಯಾಯಿತಿ ದರದಲ್ಲಿ ಜಾಹಿರಾತುಗಳನ್ನು ಪ್ರಕಟಿಸಲು ಉತ್ಸುಕವಾಗಿದೆ. ಸಹಕಾರ ಸಂಸ್ಥೆಗಳು ಸಂಪೂರ್ಣ ಮಾಹಿತಿಗಳೊಂದಿಗೆ ಜಾಹಿರಾತುಗಳನ್ನು ನೀಡಲು ಕೋರಿದೆ. ಜಾಹಿರಾತು ದರಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ದೂರವಾಣಿ ಹಾಗೂ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಿದೆ.

ಮೊಬೈಲ್ ನಂ. 9008407988,

ದೂರವಾಣಿ : 080 23564444, 23464033, 23464034

ಇ–ಮೇಲ್ : ksccsfltd@gmail.com, info@ksccsf.org

ವೆಬ್‌ಸೈಟ್ : www.ksccsf.org

## ಸಹಕಾರ ವಾರ್ತಾ ಪತ್ರಿಕೆಗೆ ಚಂದಾದಾರರಾಗಲು ಮನವಿ

ಕರ್ನಾಟಕ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪ್ರಕಟಿಸುತ್ತಿರುವ ಮಾಸಿಕ ಸಹಕಾರ ವಾರ್ತಾ ಪತ್ರಿಕೆಗೆ ಈಗಾಗಲೇ ಚಂದಾದಾರರಾಗಿರುವ ಸದಸ್ಯ ಸಹಕಾರ ಸಂಘಗಳನ್ನು ಹೊರತುಪಡಿಸಿ ಇನ್ನುಳಿದ ಪತ್ತಿನ ಸಹಕಾರ ಸಂಘಗಳು "ಸಹಕಾರ ಮಾಸಿಕ ವಾರ್ತಾ ಪತ್ರಿಕೆ"ಗೆ ಚಂದಾದಾರರಾಗಲು ಈ ಮೂಲಕ ಮನವಿ ಮಾಡಲಾಗಿದೆ.

– **ಸಂಪಾದಕರು**

## ಸಂಪಾದಕೀಯ



ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ಅಧ್ಯಕ್ಷರು

**ಸಹಕಾರಿಗಳ ಆರೋಗ್ಯ ರಕ್ಷಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಸಹಕಾರ ಇಲಾಖೆಯ ಮೂಲಕ ಯಶಸ್ವಿನಿ ಯೋಜನೆಗೆ ಮಾನ್ಯ ಮುಖ್ಯಮಂತ್ರಿಗಳು ಕಲಬುರ್ಗಿ ಜಿಲ್ಲೆ ಸೇಡಂನಲ್ಲಿ ನಡೆದ 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಚಾಲನೆ ನೀಡಿದ್ದು, ಈಗಾಗಲೇ 5ಲಕ್ಷಕ್ಕೂ ಹೆಚ್ಚು ಸಹಕಾರಿಗಳು ಈ ಯೋಜನೆಯಲ್ಲಿ ಸದಸ್ಯತ್ವ ನೋಂದಣಿ ಪಡೆದಿರುವುದನ್ನು ಗಮನಿಸಿದಾಗ ಯೋಜನೆಯ ಮಹತ್ವದ ಅರಿವಾಗುತ್ತದೆ.**

# 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಯಶಸ್ವಿ ಆಚರಣೆ

ಈ ಬಾರಿಯ 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮಗಳನ್ನು ರಾಜ್ಯದೆಲ್ಲೆಡೆ ಎಲ್ಲಾ ರೀತಿಯ ಸಹಕಾರ ಸಂಘಗಳು ಪರಿಣಾಮಕಾರಿಯಾಗಿ ಆಚರಿಸಿರುವುದು ಅತ್ಯಂತ ಸಂತೋಷದಾಯಕ ವಿಚಾರ.

ಸಹಕಾರಿಗಳು ಮುಕ್ತವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದನ್ನು ಗಮನಿಸಿದಾಗ ಸಹಕಾರ ಕ್ಷೇತ್ರದ ಯೋಜನೆಗಳು ಮತ್ತು ಅವುಗಳ ಅನುಷ್ಠಾನ ಹಾಗೂ ಪ್ರಯೋಜನಗಳನ್ನು ಸಹಕಾರಿಗಳು ಪಡೆಯುತ್ತಿರುವುದರ ಬಗ್ಗೆ ಹೆಮ್ಮೆ ಅನಿಸುತ್ತದೆ.

ಸಹಕಾರಿಗಳ ಆರೋಗ್ಯ ರಕ್ಷಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಸಹಕಾರ ಇಲಾಖೆಯ ಮೂಲಕ 'ಯಶಸ್ವಿನಿ' ಯೋಜನೆಗೆ ಮಾನ್ಯ ಮುಖ್ಯಮಂತ್ರಿಗಳು ಕಲಬುರ್ಗಿ ಜಿಲ್ಲೆ ಸೇಡಂನಲ್ಲಿ ನಡೆದ 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಚಾಲನೆ ನೀಡಿದ್ದು, ಈಗಾಗಲೇ 5ಲಕ್ಷಕ್ಕೂ ಹೆಚ್ಚು ಸಹಕಾರಿಗಳು ಈ ಯೋಜನೆಯಲ್ಲಿ ಸದಸ್ಯತ್ವ ನೋಂದಣಿ ಪಡೆದಿರುವುದನ್ನು ಗಮನಿಸಿದಾಗ ಯೋಜನೆಯ ಮಹತ್ವದ ಅರಿವಾಗುತ್ತದೆ. ಈ ಹಿನ್ನೆಲೆಯಲ್ಲಿ ಮಾನ್ಯ ಮುಖ್ಯ ಮಂತ್ರಿ ಬಸವರಾಜ ಬೊಮ್ಮಾಯಿ, ಸಹಕಾರ ಸಚಿವರಾದ ಎಸ್.ಟಿ.ಸೋಮಶೇಖರ್, ಸಹಕಾರಿ ಮಹಾಮಂಡಳಗಳ ಅಧ್ಯಕ್ಷರುಗಳು, ಸಹಕಾರ ಇಲಾಖೆಯ ಅಧಿಕಾರಿಗಳಿಗೆ ಎಲ್ಲಾ ಸಹಕಾರಿಗಳ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ.

ಸಪ್ತಾಹದ ಸಂದರ್ಭದಲ್ಲಿ ಪ್ರಮುಖ ವಿಷಯಗಳಾದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಗಣಕೀಕರಣ, ದತ್ತಾಂಶ ಬಲಪಡಿಸುವಿಕೆ, ಸಹಕಾರ ಸಂಸ್ಥೆಗಳ ಬೆಳವಣಿಗೆ ಮತ್ತು ಮುಂದಿನ ಭವಿಷ್ಯ, ಯುವಜನರು, ಮಹಿಳೆಯರು, ಆರ್ಥಿಕವಾಗಿ ಅಬಲರಾದ ಜನರ ಸಬಲೀಕರಣ, ಸಹಕಾರ ಸಂಸ್ಥೆಗಳಲ್ಲಿ ಜೆ.ಇ.ಎಂ ಪೋರ್ಟಲ್ ಬಳಕೆ, ಸಹಕಾರ ಶಿಕ್ಷಣ–ತರಬೇತಿ ಮತ್ತು ವೃತ್ತಿಪರತೆ, ನೂತನ ಆವಿಷ್ಕಾರಗಳು ಹಾಗೂ ತಂತ್ರಜ್ಞಾನ ಉನ್ನತೀಕರಣದ ಬಗ್ಗೆ ತಜ್ಞರಿಂದ ಏರ್ಪಡಿಸಿದ್ದ ಉಪನ್ಯಾಸಗಳು ಜನರ ಮೇಲೆ ಪರಿಣಾಮ ಬೀರುವುದರ ಜೊತೆಗೆ ಪರಿಣಾಮಕಾರಿ ಜಾಗೃತಿ ಮೂಡಿಸಲಾಯಿತು.

ಸಹಕಾರ ಚಳುವಳಿ ನಿಂತ ನೀರಾಗಬಾರದು. ರಾಜ್ಯದಲ್ಲಿ ಜನಸಂಖ್ಯೆ ಆರೂವರೆ ಕೋಟಿ ದಾಟಿದೆ. ಸಹಕಾರ ಕಕ್ಷೆಗೆ ಸೇರ್ಪಡೆಯಾಗಬೇಕಾದವರ ಸಂಖ್ಯೆ ಬಹಳಷ್ಟಿದೆ. ಸಹಕಾರ ಶಿಕ್ಷಣ–ತರಬೇತಿ–ಪ್ರಚಾರ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿ ಸದಸ್ಯರನ್ನಾಗಿ ಸಹಕಾರ ಕ್ಷೇತ್ರದ ವಿವಿಧ ವಲಯಗಳಲ್ಲಿ ಸಿಗುವ ಸೌಲಭ್ಯಗಳನ್ನು ದೊರಕಿಸಿಕೊಡಬೇಕಾದ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ. ಈ ನಿಟ್ಟಿನಲ್ಲಿ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಏರ್ಪಡಿಸಿದ್ದ ಚರ್ಚೆಗಳು, ಹಿರಿಯ ಸಹಕಾರಿಗಳು ಮತ್ತು ಸಚಿವರು, ಶಾಸಕರುಗಳು ನೀಡಿದ ಮಾರ್ಗದರ್ಶನಗಳು ಪ್ರೇರಣೆಯಾಗಿವೆ.

ಈ ನಿಟ್ಟಿನಲ್ಲಿ ನಾವೆಲ್ಲರೂ ಬದ್ದತೆಯಿಂದ ಸಹಕಾರ ಕ್ಷೇತ್ರದಲ್ಲಿ ತೊಡಗಿಸಿಕೊಂಡು ಮತ್ತಷ್ಟು ಸೇವೆಗಳನ್ನು ವಿಸ್ತರಿಸಿ 'ಸಹಕಾರ' ವಲಯ ಪರಿಣಾಮಕಾರಿ ಸೇವಾ, ಆರ್ಥಿಕ ವಲಯವಾಗಿ ಮಾರ್ಪಾಡು ಮಾಡಬೇಕಾದ ಚಿಂತನೆಗಳು ನಮ್ಮದಾಗಲಿ ಎಂದು ಆಶೀಸುತ್ತೇನೆ.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**
ನಂ. 16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ,
ಮಲ್ಲೇಶ್ವರಂ, ಬೆಂಗಳೂರು – 560003
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀಮತಿ ಕೆ. ಲಲಿತ ಟಿ.ಟಿ. ದೇವೇಗೌಡ**

ಕಾರ್ಯನಿರ್ವಾಹಕ ಸಂಪಾದಕರು :
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್ ಗೌಡ**

ಸದಸ್ಯರು :
**ಶ್ರೀ ಕೆ. ಕೃಷ್ಣಮೂರ್ತಿ, ಶ್ರೀ ಟಿ. ಮಲ್ಲಿಕಾರ್ಜುನಯ್ಯ**
**ಶ್ರೀ ಹೆಚ್.ಟಿ. ನಾಗೇಶ್, ಶ್ರೀ ಚಿತ್ತರಂಜನ್ ಬೋಳಾರ್**

ಸಂಪಾದಕರು :
**ಶ್ರೀಮತಿ ಪಿ. ಆಶಾಲತಾ**
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರಭಾರ)

# ಬಂಡವಾಳ ವೃದ್ಧಿ ತೆರಿಗೆ: ಬದಲಾವಣೆ ಸಾಧ್ಯತೆ




**ನವದೆಹಲಿ:** ದೀರ್ಘಾವಧಿ ಬಂಡವಾಳ ವೃದ್ಧಿ ತೆರಿಗೆಯಲ್ಲಿ (ಎಲ್‌ಟಿಸಿಜಿ) ಕೆಲವು ಬದಲಾವಣೆಗಳನ್ನು ತರಲು ಕೇಂದ್ರ ಹಣಕಾಸು ಸಚಿವಾಲಯ ಪರಿಶೀಲನೆ ನಡೆಸಿದೆ. ಒಂದು ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಡಿಮ್ಯಾಟ್ ಖಾತೆಯಲ್ಲಿ ಇರಿಸಿಕೊಂಡ ಷೇರುಗಳ ಮಾರಾಟ ಮಾಡಿದ ನಂತರ ಬರುವ ಲಾಭಕ್ಕೆ ಈಗ ಎಲ್‌ಟಿಸಿಜಿ ತೆರಿಗೆ ಅನ್ವಯವಾಗುತ್ತಿದೆ. ಸ್ಥಿರಾಸ್ತಿಯನ್ನು ಸಂಪಾದಿಸಿದ ಎರಡು ವರ್ಷಗಳ ನಂತರ ಮಾರಾಟ ಮಾಡಿದಾಗ ಸಿಗುವ ಲಾಭಕ್ಕೆ, ಆಭರಣಗಳನ್ನು ಮೂರು ವರ್ಷಗಳ ನಂತರ ಮಾರಾಟ ಮಾಡಿದಾಗ ಬರುವ ಲಾಭಕ್ಕೆ ಎಲ್‌ಟಿಸಿಜಿ ತೆರಿಗೆ ಅನ್ವಯವಾಗುತ್ತದೆ. 'ಬಂಡವಾಳ ವೃದ್ಧಿ ತೆರಿಗೆಯನ್ನು ಸರಳೀಕರಿಸುವ ಹಾಗೂ ಅದನ್ನು ತೆರಿಗೆದಾರ ಸ್ನೇಹಿ ಆಗಿಸುವ ಉದ್ದೇಶ ಇದೆ. ಬೇರೆ ಬೇರೆ ಆಸ್ತಿಗಳ ವಿಚಾರವಾಗಿ ಇರುವ ಭಿನ್ನ ತೆರಿಗೆ ಪ್ರಮಾಣಗಳಲ್ಲಿ ಸಮಾನತೆ ತರುವ ಉದ್ದೇಶವೂ ಇದೆ' ಎಂದು ಮೂಲಗಳು ಹೇಳಿವೆ. ಫೆಬ್ರುವರಿಯಲ್ಲಿ ಮಂಡನೆಯಾಗುವ ಕೇಂದ್ರ ಬಜೆಟ್‌ನಲ್ಲಿ ಈ ಕುರಿತು ಘೋಷಣೆ ಮಾಡುವ ನಿರೀಕ್ಷೆ ಇದೆ.

## ಡಿ.17ರಂದು ಜಿಎಸ್‌ಟಿ ಮಂಡಳಿ ವರ್ಚುವಲ್ ಸಭೆ

ನವದೆಹಲಿ: ಜಿಎಸ್‌ಟಿ ಮಂಡಳಿಯ 48ನೇ ಸಭೆಯು ಡಿಸೆಂಬರ್17ರಂದು ವಿಡಿಯೊ ಕಾನ್ಫರೆನ್ಸ್ ಮೂಲಕ ನಡೆಯಲಿದೆ ಎಂದು ಮಂಡಳಿಯು ತಿಳಿಸಿದೆ. ಕ್ಯಾಸಿನೊ, ಆನ್‌ಲೈನ್‌ಆಟಗಳು ಹಾಗೂ ಕುದುರೆ ರೇಸ್‌ಗೆ ಎಷ್ಟು ಪ್ರಮಾಣದ ಜಿಎಸ್‌ಟಿ ವಿಧಿಸಬೇಕು ಎನ್ನುವ ಕುರಿತು ಹಾಗೂ ಜಿಎಸ್‌ಟಿ ಮೇಲ್ಮನವಿ ನ್ಯಾಯಮಂಡಳಿ ರಚನೆ ಮಾಡುವ ಕುರಿತು ರಾಜ್ಯ ಹಣಕಾಸು ಸಚಿವರ ಸಮಿತಿಯ ವರದಿಗಳ ಕುರಿತು ಸಭೆಯಲ್ಲಿ ಚರ್ಚೆ ನಡೆಯಲಿದೆ.

**ಸುಭಾಷಿತ :** ನೀವು ಎಲ್ಲರನ್ನೂ ಮೆಚ್ಚಿಸಲು ಪ್ರಯತ್ನಿಸಿದರೆ, ನೀವು ಯಾರನ್ನು ಮೆಚ್ಚಿಸುವುದಿಲ್ಲ, ಇತರರ ಸಂತೋಷಕ್ಕಾಗಿ ನಿಮ್ಮ ಜೀವನವನ್ನು ನಡೆಸುವುದು ಅಸಾಧ್ಯ. – ಸುಧಾಮೂರ್ತಿ

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು "ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು" ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಒ.
ಐದು ವರ್ಷಗಳ ಚಂದಾ: ರೂ : 1500/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

# ಮೈಸೂರಿನಲ್ಲಿ 69ನೇ ಅಖಿಲ ಭಾರತ ಸಹಕಾರ ಸಪ್ತಾಹ

## ಯುವ ಜನರು ಸಹಕಾರ ಕ್ಷೇತ್ರದಲ್ಲಿ ಪಾಲ್ಗೊಳ್ಳಲಿ : ಎಸ್.ಟಿ. ಸೋಮಶೇಖರ್

## ಸಹಕಾರ ಕ್ಷೇತ್ರದ ಸಾಧನೆ ಪ್ರಶಂಸಾರ್ಹ – ಪ್ರಾಮಾಣಿಕ ಸೇವೆ ಅಗತ್ಯ : ಶಾಸಕ ಜಿ.ಟಿ. ದೇವೇಗೌಡ



**ಮೈಸೂರು :** ಸಹಕಾರ ಕ್ಷೇತ್ರದಿಂದ ಲಕ್ಷಾಂತರ ಜನರಿಗೆ ಉದ್ಯೋಗ ಮತ್ತು ರೈತರಿಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ. ಎಲ್ಲಾ ವಲಯದಲ್ಲಿ ಸಹಕಾರ ಕ್ಷೇತ್ರ ಮುಂಚೂಣಿಯಲ್ಲಿದೆ. ಪರಸ್ಪರ ಸಹಕಾರ ಇದ್ದರೆ ಮಾತ್ರ ಸಹಕಾರ ಸಂಘಗಳು ಯಶಸ್ವಿಯಾಗುತ್ತವೆ ಎಂದು ಸಹಕಾರ ಸಚಿವ ಎಸ್.ಟಿ. ಸೋಮಶೇಖರ್ ಹೇಳಿದರು.

ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಘಟಿಕೋತ್ಸವ ಭವನದಲ್ಲಿ ಸಹಕಾರ ಮಹಮಂಡಳ, ಪತ್ತಿನ ಸಂಘಗಳ ಸಹಕಾರ ಮಹಾಮಂಡಳ ಮತ್ತು ಎಲ್ಲ ರೀತಿಯ ಸಂಘಗಳ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಹಕಾರ ಇಲಾಖೆ ಬದ್ಧತೆಯಿಂದ ಕೆಲಸ ಮಾಡುತ್ತಿದ್ದು, ಅನೇಕ ಯೋಜನೆಗಳನ್ನು ರೂಪಿಸುತ್ತಿದೆ. ಈ ವರ್ಷ 33 ಲಕ್ಷ ರೈತರಿಗೆ ವಿಶೇಷವಾಗಿ 3 ಲಕ್ಷ ಹೊಸ ರೈತರಿಗೆ ಒಟ್ಟು ರೂ. 24 ಸಾವಿರ ಕೋಟಿ ಸಾಲ ನೀಡುವ ಗುರಿ ಹೊಂದಲಾಗಿದ್ದು, 21 ಡಿಸಿಸಿ ಬ್ಯಾಂಕುಗಳು ಲಾಭದಲ್ಲಿವೆ. ರೈತರಿಗೆ ಸಾಲಸೌಲಭ್ಯ ಕಲ್ಪಿಸುವಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಸಾಲ ವಿತರಣೆ ಜೊತೆಗೆ ಸಾಲ ಮರುಪಾವತಿ ಕೂಡ ಉತ್ತಮವಾಗಿ ಆಗುತ್ತಿದೆ ಎಂದರು.

ಕೆಲವೊಂದು ಸಕ್ಕರೆ ಕಾರ್ಖಾನೆಗಳಿಂದ ಸಾಲ ಬಾಕಿಯಿದೆ. ಕೆಲವರು ಬಡ್ಡಿ ಕಟ್ಟುತ್ತಿದ್ದಾರೆ. ಮತ್ತೆ ಕೆಲವರು ಅಸಲು ಮತ್ತು ಬಡ್ಡಿ ಕಟ್ಟುತ್ತಿದ್ದಾರೆ. ಬ್ಯಾಂಕುಗಳಲ್ಲಿನ ವಂಚನೆ ಪ್ರಕರಣಗಳಿಗೆ ಕಡಿವಾಣ ಹಾಕಲು ಕಾನೂನು ರೂಪಿಸುವ ಪರಿಸ್ಥಿತಿ ಬಂದಿದೆ. ಆರ್.ಬಿ.ಐ. ಕೂಡ ಕಠಿಣ ಕ್ರಮ ಕೈಗೊಳ್ಳುತ್ತಿದೆ ಎಂದು ಹೇಳಿದರು.

ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿ ಆಗಿದ್ದಾಗ, ಎಚ್. ವಿಶ್ವನಾಥ್ ಅವರು ಸಹಕಾರ ಸಚಿವರಾಗಿದ್ದಾಗ ಯಶಸ್ವಿನಿ ಯೋಜನೆ ಜಾರಿಗೆ ತರಲಾಯಿತು. ಆದರೆ ಕೆಲ ವರ್ಷಗಳ ಹಿಂದೆ ಕಾರಣಾಂತರಗಳಿಂದ ಯಶಸ್ವಿನಿ ಯೋಜನೆ ರದ್ದು ಮಾಡಿದರು. ರಾಜ್ಯದಾದ್ಯಂತ ಪ್ರವಾಸ ಮಾಡಿದ ಸಂದರ್ಭದಲ್ಲಿ ಯಶಸ್ವಿನಿ ಜಾರಿಗೆ ಒತ್ತಾಯ ಕೇಳಿಬಂದಿತು. ಇದನ್ನು ಮುಖ್ಯಮಂತ್ರಿಗಳು, ಸಹಕಾರ ಸಚಿವರ ಗಮನಕ್ಕೆ ತಂದ ಬಳಿಕ ಬಜೆಟ್‌ನಲ್ಲಿ ಯೋಜನೆ ಘೋಷಿಸಿದರು ಎಂದರು.

ಯಶಸ್ವಿನಿ ಯೋಜನೆಗೆ ನವೆಂಬರ್ 14 ರಂದು ಮುಖ್ಯಮಂತ್ರಿಗಳು ಕಲಬುರಗಿಯಲ್ಲಿ ಚಾಲನೆ ನೀಡಿದ್ದಾರೆ. ಈಗಾಗಲೇ 5 ಲಕ್ಷ ಸದಸ್ಯರು ನೋಂದಣಿ ಆಗಿದ್ದು, ಶೀಘ್ರವೇ ಯೋಜನೆಯಲ್ಲಿ ಹೆಚ್ಚಿನ ಸಂಖ್ಯೆಯ ಸದಸ್ಯರು ನೋಂದಣಿ ಆಗುವ ವಿಶ್ವಾಸವನ್ನು ಅಧಿಕಾರಿಗಳು ವ್ಯಕ್ತಪಡಿಸಿದ್ದಾರೆ ಎಂದರು. ನಂದಿನಿ ಕ್ಷೀರ ಸಮೃದ್ಧಿ ಬ್ಯಾಂಕ್ ಸ್ಥಾಪನೆಗೆ ಮುಖ್ಯಮಂತ್ರಿ ಮುತುವರ್ಜಿ ವಹಿಸಿದರು. ಇತ್ತೀಚಿನ ವರ್ಷಗಳಲ್ಲಿ ಅರ್ಬನ್ ಕೋ–ಆಪರೇಟಿವ್ ಬ್ಯಾಂಕ್‌ಗೆ ಆರ್‌ಬಿಐ ಅನುಮತಿ ನೀಡಿಲ್ಲ. ಶೀಘ್ರವೇ ಈ ಬಗ್ಗೆ ಸಭೆ ನಡೆಯಲಿದೆ. ಅಲ್ಲಿ ಒಪ್ಪಿಗೆ ಸಿಕ್ಕರೆ ಶೀಘ್ರದಲ್ಲೇ ಬ್ಯಾಂಕ್ ಆರಂಭವಾಗಲಿದೆ. ಇದರಿಂದ ಹಾಲು ಪೂರೈಕೆ ಮಾಡುವವರಿಗೆ ಸಾಲಸೌಲಭ್ಯ ಸಿಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಿ, ಹಿರಿಯ ಸಹಕಾರಿಗಳಿಗೆ ಗೌರವಿಸಲಾಯಿತು. ಇದೇ ವೇಳೆ ಸಹಕಾರ ವಾರ ಪತ್ರಿಕೆಯನ್ನು ಬಿಡುಗಡೆ ಮಾಡಲಾಯಿತು. ಸಹಕಾರ ಕ್ಷೇತ್ರ ಅದ್ಭುತ ಸಾಧನೆ ಮಾಡಿದೆ. ಸಮಾಜದ ಬಡವರು, ಅಶಕ್ತರು, ರೈತರು, ರೈತ ಕಾರ್ಮಿಕರು ಅನುಭವಿಸುತ್ತಿದ್ದ ಶೋಷಣೆಯನ್ನು ತಪ್ಪಿಸಿದೆ. ಎಲ್ಲ ವರ್ಗದ ಜನರೂ ಸಮಾನ ಅವಕಾಶಗಳನ್ನು

ಕಲ್ಪಿಸಿ ಅಬಲರ ಕಲ್ಪವೃಕ್ಷ ಕಾಮಧೇನು ಎನಿಸಿಕೊಂಡಿದೆ ಎಂದು ಮಾಜಿ ಸಚಿವರು, ಶಾಸಕರು, ಸಹಕಾರ ಮಹಾಮಂಡಳದ ಅಧ್ಯಕ್ಷರೂ ಆದ ಜಿ.ಟಿ. ದೇವೇಗೌಡರು ಹೇಳಿದರು.

ಅವರು ಮೈಸೂರಿನಲ್ಲಿ 69ನೇ ಅಖಿಲ ಭಾರತ ಸಹಕಾರ ಸಪ್ತಾಹದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಸಹಕಾರ ಸಂಘಗಳು ಆತ್ಮಾವಲೋಕನ ಮಾಡಿಕೊಳ್ಳಬೇಕು. ಪ್ರಾಮಾಣಿಕತೆ, ನಿಸ್ವಾರ್ಥದಿಂದ ಕಾರ್ಯನಿರ್ವಹಿಸಿದರೆ ಯಾವ ದೇವಾಲಯಕ್ಕೂ ಹೋಗುವ ಅಗತ್ಯ ಇರುವುದಿಲ್ಲ ಎಂದು ಶಾಸಕರೂ ಆದ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಅಭಿಪ್ರಾಯಪಟ್ಟರು.

ಇತ್ತೀಚಿನ ದಿನಗಳಲ್ಲಿ ಸಹಕಾರ ಕ್ಷೇತ್ರದ ಪರಿಣಾಮಕಾರಿ ಸಾಧನೆಯತ್ತ ಸಾಗುತ್ತಿದೆ. ಆದರೂ ಕೆಲವು ಸಂದರ್ಭದಲ್ಲಿ ಸಹಕಾರ ಸಂಘದಲ್ಲಿ ಲೋಪ–ದೋಷಗಳು ಕಂಡುಬರುತ್ತಿವೆ. ಆಗಿರುವ ಲೋಪದೋಷವನ್ನು ಸರಿಪಡಿಸಿಕೊಳ್ಳಬೇಕು. ಉತ್ತಮ ಆಡಳಿತ ನಿರ್ವಹಣೆ ಮೂಲಕ ಸಂಘದ ಬೆಳವಣಿಗೆಗೆ ಶ್ರಮವಹಿಸಬೇಕು. ಪ್ರತಿಯೊಬ್ಬ ಪದಾಧಿಕಾರಿಯೂ ದಿನಕ್ಕೆ ಒಂದು ಗಂಟೆಯಾದರೂ ಸಂಘದ ಕೆಲಸ ಮಾಡಬೇಕು. ಸಾಲ ಸೇರಿದಂತೆ ಇನ್ನಿತರ ಸೌಲಭ್ಯವನ್ನು ಕಲ್ಪಿಸಿಕೊಡದಿದ್ದರೆ ಜನರಿಗೆ ದ್ರೋಹ ಮಾಡಿದಂತಾಗುತ್ತದೆ. ತಮ್ಮ ಭಾಷಣದಲ್ಲಿ ತಮ್ಮ ಬದುಕನ್ನೇ ಉದಾಹರಿಸುತ್ತಾ, ಕುಗ್ರಾಮದಿಂದ ಬಂದು ವಿಶೇಷ ಶಿಕ್ಷಣವೂ ಇಲ್ಲದೆ ಕೇವಲ ಪ್ರಯತ್ನದಿಂದಲೇ ಮೇಲೆ ಬಂದು ಸಹಕಾರ ಸಂಘದ ಕಾರ್ಯದರ್ಶಿಯಾಗಿದ್ದವನು, ಸಹಕಾರ ಸಚಿವನಾದುದನ್ನು ವಿವರಿಸಿ ಸೇವೆಯನ್ನೇ ಗುರಿಯಾಗಿರಿಸಿಕೊಂಡು ಕೆಲಸ ಮಾಡಿದರೆ ಅಧಿಕಾರ, ಸೇವಾ ತೃಪ್ತಿಯಿಂದ ಜೀವನ ಸಾರ್ಥಕ್ಯವನ್ನು ಪಡೆಯಬಹುದು ಎಂದರು. ಸಹಕಾರ ಕ್ಷೇತ್ರದ ಅಪಾರ ಸಾಧನೆಯನ್ನು ವಿವರಿಸಿದ ಜಿ.ಟಿ. ದೇವೇಗೌಡರು, ಸಮಾಜದ ಬಡವರಿಗೆ, ಅಬಲರಿಗೆ ಸಹಕಾರ ಕ್ಷೇತ್ರ ನೀಡುವಂತಹ ಪ್ರಯೋಜನ ಮತ್ತೆಲ್ಲೂ ಲಭ್ಯವಿಲ್ಲ ಎಂದರು. ನಿಸ್ವಾರ್ಥ ಸಹಕಾರಿ ಶ್ರೇಷ್ಠರನ್ನು ಸನ್ಮಾನಿಸುವ ಮೂಲಕ ಅವರ ಸೇವೆಗೆ ಕೃತಜ್ಞತೆ ಸಲ್ಲಿಸುತ್ತಿದ್ದೇವೆ ಎಂದ ಅವರು, ರಾಜ್ಯದ ಸಹಕಾರಾಭಿವೃದ್ಧಿಗೆ ಸಹಕಾರ



ಸಚಿವ ಎಸ್.ಟಿ. ಸೋಮಶೇಖರ್ ಅವರ ಸೇವೆಯನ್ನು ಶ್ಲಾಘಿಸಿದರು. ಕೊರೋನಾ ಸಂದರ್ಭದ ಅವರ ಸೇವೆ ಸ್ಮರಣೀಯ ಎಂದರು.

ಇತ್ತೀಚಿನ ದಿನಗಳಲ್ಲಿ ಸಹಕಾರ ಕ್ಷೇತ್ರದಲ್ಲಿ ಹೊರಗಿನ ಹಸ್ತಕ್ಷೇಪ ಕಾಣುತ್ತಿದೆ. ಇದರಿಂದ ಸಹಕಾರ ಕ್ಷೇತ್ರದ ಮಹತ್ವಕ್ಕೆ ಧಕ್ಕೆಯಾಗುತ್ತಿದೆ. ಪಕ್ಷಪಾತ ಧೋರಣೆಯಿಂದಾಗಿ ಕೆಲವರು ಸಹಕಾರ ಕ್ಷೇತ್ರದಿಂದ ದೂರವುಳಿಯುವಂತಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮೈಸೂರು ಸಹಕಾರ ಒಕ್ಕೂಟದ ಅಧ್ಯಕ್ಷರಾದ ಹೆಚ್.ವಿ. ರಾಜೀವ್ ಅವರು ಎಲ್ಲರನ್ನು ಸ್ವಾಗತಿಸಿ ಜಿಲ್ಲೆಯ ಸಮಗ್ರ ಸಹಕಾರ ಚಳವಳಿಯ ಸಾಧನೆಯನ್ನು ವಿವರಿಸಿದರು. ಸಹಕಾರ ಸಚಿವರಾದ ಎಸ್.ಟಿ. ಸೋಮಶೇಖರ್ ಹಾಗೂ ಜಿ.ಟಿ. ದೇವೇಗೌಡರ ಅಮೂಲ್ಯ ಕೊಡುಗೆಯನ್ನು ಶ್ಲಾಘಿಸಿದರು. ಮೈಸೂರು–ಚಾಮರಾಜನಗರ ಹಾಲು ಒಕ್ಕೂಟದ ಅಧ್ಯಕ್ಷರಾದ ಪಿ.ಎಂ. ಪ್ರಸನ್ನ ಅವರು ಮಾತನಾಡಿ ಹಾಲು ಉತ್ಪಾದಕರ ಹಿತ ಕಾಯಲು ಒಕ್ಕೂಟ ಪ್ರಯತ್ನಪಡುತ್ತಿದೆ. ಸಹಕಾರ ಸಪ್ತಾಹ ಸಂದರ್ಭದಲ್ಲಿ ಚಳವಳಿಯ ಬೆಳವಣಿಗೆಯತ್ತ ಎಲ್ಲರೂ ಶ್ರಮಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ರಾಜ್ಯ ಪತ್ತಿನ ಸಹಕಾರ ಮಹಾಮಂಡಳದ ಅಧ್ಯಕ್ಷೆ ಕೆ. ಲಲಿತ ದೇವೇಗೌಡ, ಅಪೆಕ್ಸ್ ಬ್ಯಾಂಕ್ ಉಪಾಧ್ಯಕ್ಷರು ಹಾಗೂ ಮೈಸೂರು ಡಿಸಿಸಿ ಬ್ಯಾಂಕ್ ಆಧ್ಯಕ್ಷರಾದ ಜಿ.ಡಿ. ಹರೀಶ್‌ಗೌಡ, ಮೇಯರ್





ಶಿವಕುಮಾರ್, ವಿಧಾನ ಪರಿಷತ್ ಸದಸ್ಯರಾದ ಕೆ. ಜಯಕೃಷ್ಣೇಗೌಡ, ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ.ಕೆ.ಮಹೇಂದ್ರಪ್ರಸಾದ್ ಗೌಡ ಹಾಗೂ ನಿರ್ದೇಶಕರುಗಳಾದ ಶ್ರೀವಿ.ರಾಜು, ಶ್ರೀ ಬಿ.ಡಿ.ಭೂಕಾಂತ, ಡಾ॥ಸಂಜಯ ಪಿ ಹೊಸಮಠ, ಶ್ರೀ ಎಂ.ಜೆ.ನರೇಂದ್ರಕುಮಾರ, ಶ್ರೀ ಡಿ.ಚನ್ನಯ್ಯ, ಶ್ರೀ ಕೆ.ಕೃಷ್ಣಮೂರ್ತಿ ಶ್ರೀ ಪಿ.ಕೆ.ಜಯಕೃಷ್ಣೇಗೌಡ, ಶ್ರೀ ಗುರುಪಾದಪ್ಪಗೌಡ ಬ ಪಾಟೀಲ, ಶ್ರೀ ಧರೇಪ್ಪ ಮಹದೇವ ಆಲಗೂರ, ಶ್ರೀ ಹೆಚ್.ಟಿ.ನಾಗೇಶ್, ಶ್ರೀ ಡಿ.ಆರ್.ನಾಗೇಶಪ್ಪ, ಶ್ರೀ ಚಿತ್ತರಂಜನ್ ಬೋಳಾರ್‌ಗಳು ಭಾಗವಹಿಸಿದ್ದರು. ಪತ್ತಿನ ಮಹಾಮಂಡಳದ ವತಿಯಿಂದ ಉತ್ತಮ ಸಹಕಾರಿಗಳಾಗಿ ಶ್ರೀ ಚನ್ನಕೇಶವ.ಕೆ ಉಪಾಧ್ಯಕ್ಷರು, ಯಶವಂತಪುರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ. ಬೆಂಗಳೂರು, ಸಿ.ನಾಗರತ್ನಮ್ಮ ಅಧ್ಯಕ್ಷರು, ಶ್ರೀನಿವಾಸನಗರ ಮಹಿಳಾ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ. ಬೆಂಗಳೂರು ಶ್ರೀ ನಿಂಗೇಗೌಡರು, ಉಪಾಧ್ಯಕ್ಷರು ವಿಜಯನಗರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು ಶ್ರೀ ಎ.ದೇವಣ್ಣ ನಿರ್ದೇಶಕರು, ಲೋಕಪಾವನಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿ., ಬೆಂಗಳೂರು ಶ್ರೀ ಕೆ.ಎನ್. ಮಂಜಾಚಾರ್ ಅಧ್ಯಕ್ಷರು, ಶ್ರೀ ಸ್ವಾಮಿ ವಿವೇಕಾನಂದ ಪತ್ತಿನ ಸಹಕಾರ ಸಂಘ ನಿ., ಶಿಕಾರಿಪುರ ಶಿವಮೊಗ್ಗ ಜಿಲ್ಲೆ, ಶ್ರೀ ಮೊಹಮ್ಮದ್ ಅಲೀಂ, ಸಹಾರ ಅಲ್ಪಸಂಖ್ಯಾತರ ವಿವಿಧೋದ್ದೇಶ ಸಹಕಾರ ಸಂಘ ನಿ., ಹೊಸದುರ್ಗ ಚಿತ್ರದುರ್ಗ ಜಿಲ್ಲೆ. ಶ್ರೀ ಮಲಕೇಂದ್ರಗೌಡ ಬಸನಗೌಡ ಪಾಟೀಲ, ಅಧ್ಯಕ್ಷರು ಶ್ರೀ ಬಸವೇಶ್ವರ ಪತ್ತಿನ ಸಹಕಾರಿ ಸಂಘ ನಿಯಮಿತ., ಮುದ್ದೇಬಿಹಾಳ, ವಿಜಾಪುರ ಜಿಲ್ಲೆ, ಶ್ರೀ ಜೀವನ್ ಲೋಯ್ಡ್ ಪಿಂಟೊ, ಬಂಟ್ವಾಳ ಕೆಥೋಲಿಕ್ ಕ್ರೆಡಿಟ್ ಸಹಕಾರ ಸಂಘ ನಿ.,ಬಂಟ್ವಾಳ ದಕ್ಷಿಣ ಕನ್ನಡ ಜಿಲ್ಲೆ ಹಾಗೂ ಉತ್ತಮ ಸಹಕಾರ ಸಂಘಗಳನ್ನಾಗಿ ಬಸವಶ್ರೀ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ., ಬೆಂಗಳೂರು, ದಿ ಮಿಲೇನಿಯಂ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಬೆಂಗಳೂರು, ಹಮ್‌ದರ್ದ್ ಕೋ–ಆಪರೇಟಿವ್ ಸೊಸೈಟಿ ಲಿ. ಶಿವಮೊಗ್ಗ, ಸ್ವಾಮಿ ವಿವೇಕಾನಂದ ಪತ್ತಿನ ಸಹಕಾರ ಸಂಘ ನಿ., ಬಟವಾಡಿ, ತುಮಕೂರು, ದಿ ಮಹಾಂತೇಶ ಅರ್ಬನ್ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿ ಲಿ., ರಾಮದುರ್ಗ, ಬೆಳಗಾವಿ ಜಿಲ್ಲೆ. ವಿಘ್ನರಾಜ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿ ಲಿ., ಶಿರಸಿ, ಉತ್ತರಕನ್ನಡ ಜಿಲ್ಲೆ ಶ್ರೀ ಮಾಹೇಶ್ವರ ಪತ್ತಿನ ಸಹಕಾರ ಸಂಘ ನಿ., ಹಾವೇರಿ, ಜ್ಯೋತಿ ಪತ್ತಿನ ಸಹಕಾರ ಸಂಘ ನಿ., ಬದಾಮಿ, ಬಾಗಲಕೋಟೆ ಜಿಲ್ಲೆ, ವೀನಸ್‌ಎವರ್‌ಸೈನ್ ಪತ್ತಿನ ಸಹಕಾರ ಸಂಘ ನಿ., ಕೊಪ್ಪಳ, ಶ್ರೀ ಪಾರ್ವತಿ ಪರಮೇಶ್ವರ ಪತ್ತಿನ ಸಹಕಾರ ಸಂಘ ನಿಯಮಿತ., ಕಮತಗಿ, ಬಾಗಲಕೋಟೆ ಜಿಲ್ಲೆ, ಮೈಸೂರು ನಗರ ಪೋಲೀಸ್ ಸ್ಪಂದನ ಪತ್ತಿನ ಸಹಕಾರ ಸಂಘ ನಿ., ಮೈಸೂರು, ಭಾರತೀ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ನಿ., ಭಾರತೀನಗರ, ಮಂಡ್ಯ ಜಿಲ್ಲೆ ಗೌರವಿಸಿ, ಸನ್ಮಾನಿಸಲಾಯಿತು.

**ಸಹಕಾರ ರತ್ನ ಪ್ರಶಸ್ತಿ ಪಡೆದವರು**



# ಬೆಂಗಳೂರಿನಲ್ಲಿ 69ನೇ ಅಖಿಲ ಭಾರತ ಸಹಕಾರ ಸಪ್ತಾಹ

## ಸಹಕಾರ ಕ್ಷೇತ್ರದ ಮೂಲಕ ಮತ್ತಷ್ಟು ಜನಪರ ಕಾರ್ಯಕ್ರಮಗಳು ನಡೆಯಲಿ : ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ



**ಬೆಂಗಳೂರು :** ರೈತರು ಮತ್ತು ಮಹಿಳೆಯರ ಸ್ವಾವಲಂಬಿ ಬದುಕಿನ ಜೀವಾಳವಾಗಿರುವ ಸಹಕಾರ ಕ್ಷೇತ್ರ ತನ್ನ ಮುಂದಿರುವ ಸವಾಲುಗಳನ್ನು ಮೆಟ್ಟಿ ನಿಂತು ಮತ್ತಷ್ಟು ಜನಪರ ಕಾರ್ಯಕ್ರಮಗಳನ್ನು ನಡೆಸುವಂತಾಗಲಿ ಎಂದು ಸಹಕಾರಿಗಳು ಸಂಕಲ್ಪ ಮಾಡಬೇಕು ಎಂಬುದಾಗಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಕರೆ ನೀಡಿದರು.

ಅವರು ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಕರ್ನಾಟಕ ರಾಜ್ಯ ವಸತಿ ಸಹಕಾರ ಮಹಾಮಂಡಳ, ಎಲ್ಲಾ ರೀತಿಯ ಸಹಕಾರ ಸಂಸ್ಥೆಗಳ ಸಹಯೋಗದೊಂದಿಗೆ ಕೆಂಗೇರಿ ಗಣೇಶ ಮೈದಾನದಲ್ಲಿ ಏರ್ಪಡಿಸಲಾಗಿದ್ದ 69ನೇ ಅಖಿಲ ಭಾರತ ಸಹಕಾರ ಸಪ್ತಾಹದ ಮಹಿಳೆ, ಯುವಜನ, ಅಬಲವರ್ಗ ಹಾಗೂ ಆರೋಗ್ಯಕ್ಕಾಗಿ ಸಹಕಾರ ಸಂಸ್ಥೆಗಳ ದಿನವನ್ನು ಉದ್ಘಾಟಿಸಿ ಮಾತನಾಡಿದರು.

ಸಹಕಾರ ದುರೀಣರ ನಿಸ್ವಾರ್ಥ ಸೇವೆ ಸಹಕಾರ ಕ್ಷೇತ್ರವನ್ನು ಇಷ್ಟು ಎತ್ತರಕ್ಕೆ ಬೆಳೆಸಿದ ಹಿರಿಯರ ಮಾರ್ಗದರ್ಶನದಲ್ಲಿ ಕಿರಿಯರು ಸಹ ಒಳ್ಳೆಯ ಕಾರ್ಯ ಮಾಡುತ್ತಿದ್ದಾರೆ. ಜನರು ಸಹಕಾರ ಸಂಘಗಳ ಜೊತೆ ಭಾವನಾತ್ಮಕ ಸಂಬಂಧ ಹೊಂದಿದ್ದು ಜನರ ಆರ್ಥಿಕ ಹಾಗೂ ಸಾಮಾಜಿಕ ಜೀವನದಲ್ಲಿ ಸಹಕಾರ ವಲಯ ಉತ್ತಮ ಕೆಲಸಗಳನ್ನು ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸರ್ಕಾರವು ಸಹಕಾರ ಸಂಘಗಳ ಮೂಲಕ ರೈತರಿಗೆ ಶೂನ್ಯ ಮತ್ತು ರಿಯಾಯಿತಿ ಬಡ್ಡಿದರದಲ್ಲಿ ಸಾಲ ವಿತರಣೆ ಮಾಡುತ್ತಿದೆ. ಹಾಗೆಯೇ, ಸ್ವಸಹಾಯ ಸಂಘಗಳಿಗೆ ಸಾಲ ನೀಡಲಾಗುತ್ತಿದೆ. 5 ಸಾವಿರಕ್ಕಿಂತ ಹೆಚ್ಚು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಗಣಕೀಕರಣ ಮಾಡುವ ಯೋಜನೆಯನ್ನು ಸರ್ಕಾರ ಆರಂಭಿಸಿದೆ. ಯಶಸ್ವಿನಿ ಆರೋಗ್ಯ ರಕ್ಷಣೆಗೆ 5 ಲಕ್ಷ ರೂ.ಗಳ ವರೆಗಿನ ಸೌಲಭ್ಯ ನೀಡುತ್ತಿದೆ ಎಂದರು.

ಸಚಿವ ಎಸ್.ಟಿ. ಸೋಮಶೇಖರ್ ಪರಿಶ್ರಮದಿಂದ ಯಶಸ್ವಿನಿ ಯೋಜನೆ ಮರು ಜಾರಿಯಾಗಿದೆ. ಕೋವಿಡ್ ಸಂದರ್ಭದಲ್ಲಿ ಸಹಕಾರ ಸಂಘಗಳು 6 ಲಕ್ಷ ರೈತರಿಗೆ ಹಾಗೂ ಸ್ವಸಹಾಯ ಸಂಘಗಳಿಗೆ ಅನೇಕ ರೀತಿಯಲ್ಲಿ ಸಹಾಯ ಮಾಡಿದ್ದೇವೆ ಎಂದು ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ, ಸಹಕಾರ ಸಚಿವರಾದ ಎಸ್.ಟಿ. ಸೋಮಶೇಖರ್ ಅವರು ಮಾತನಾಡಿ 2022 ಹಾಗೂ 2023ನೇ ಸಾಲಿನಲ್ಲಿ 33 ಲಕ್ಷ ರೈತರಿಗೆ 24 ಸಾವಿರ ಕೋಟಿ ರೂ.ಗಳ ಕೃಷಿ ಸಾಲ ವಿತರಿಸುವ ಗುರಿಯನ್ನು ಸರ್ಕಾರ ಹೊಂದಿದೆ. ಇದರಲ್ಲಿ ಪ್ರಸ್ತುತ 15.23 ಲಕ್ಷ ರೈತರಿಗೆ 12022 ಕೋಟಿ ರೂ. ಸಾಲ ವಿತರಿಸಲಾಗಿದೆ ಎಂದರು. ಯಶಸ್ವಿನಿ ಯೋಜನೆ ಮರು ಜಾರಿಗೊಳಿಸಿದ್ದು, 300 ಕೋಟಿ ರೂ.ಗಳನ್ನು ಇದಕ್ಕಾಗಿ ಮೀಸಲಿರಿಸಲಾಗಿದೆ. ರಾಜ್ಯದ ಸಹಕಾರ ಸಂಸ್ಥೆಗಳ ಮಾತೃ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಈಗಾಗಲೇ ಜಿ.ಟಿ. ದೇವೇಗೌಡ ಅಧ್ಯಕ್ಷತೆಯಲ್ಲಿ ಉತ್ತಮವಾದ ಕಾರ್ಯಾಗಾರಗಳನ್ನು ಆಯೋಜಿಸುವ ಮೂಲಕ ಸಹಕಾರ ಚಳವಳಿಯ ಬೆಳವಣಿಗೆಗೆ ಪೂರಕವಾದ










ಕಾರ್ಯನಿರ್ವಹಿಸುತ್ತಿದೆ ಎಂದರು. ಸಹಕಾರಿಗಳ ಸಲಹೆ ಮೇರೆಗೆ ಅಗತ್ಯಬಿದ್ದರೆ ಸಹಕಾರ ಚಳವಳಿಯ ಪೂರಕ ಬೆಳವಣಿಗೆಗೆ ಅಗತ್ಯ ತಿದ್ದುಪಡಿಗಳನ್ನು ತರಲು ನಾನು ಸಲಹೆ ಸೂಚನೆಗಳನ್ನು ನಿರೀಕ್ಷಿಸುತ್ತೇನೆ ಎಂದು ತಿಳಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಸಹಕಾರ ಧ್ವಜಾರೋಹಣ ನೆರವೇರಿಸಿದ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡ ಅವರು ಮಾತನಾಡಿ, ಸಹಕಾರ ಸಂಸ್ಥೆಗಳ ಮಾತೃ ಸಂಸ್ಥೆಯಾಗಿರುವ ಮಹಾಮಂಡಳವು ಉತ್ತಮ ಕಾರ್ಯಚಟುವಟಿಕೆಗಳ ಮೂಲಕ ಚಳವಳಿಯ ಬೆಳವಣಿಗೆಗೆ ಶ್ರಮಿಸುತ್ತಿದೆ. ಪ್ರಸ್ತುತ ವರ್ಷ 110 ಸಹಕಾರಿಗಳಿಗೆ ಅವರ ಸೇವೆಯನ್ನು ಗುರುತಿಸಿ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದ್ದು, ಇದರಿಂದಾಗಿ ಸಹಕಾರಿಗಳ ಮೇಲೆ ಸಾಕಷ್ಟು ಜವಾಬ್ದಾರಿ ಹೆಚ್ಚಿದಂತಾಗಿದೆ. ಈ ನಿಟ್ಟಿನಲ್ಲಿ ರಾಜ್ಯದ ಸಹಕಾರಿಗಳೆಲ್ಲರೂ ಸಹಕಾರ ಕ್ಷೇತ್ರದ ಸವಾಲುಗಳನ್ನು ಬಗೆಹರಿಸಿ ಹೊಸ ಹೊಸ ಯೋಜನೆಗಳ ಮೂಲಕ ಚಳವಳಿಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಬೆಳೆಸುವ ಮೂಲಕ ಸಮೃದ್ಧ ಸಹಕಾರ ಕ್ಷೇತ್ರವನ್ನು ಕಟ್ಟೋಣವೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಅ. ದೇವೇಗೌಡ, ಗ್ರಾಹಕರ ಮಹಾಮಂಡಳದ ಅಧ್ಯಕ್ಷರಾದ ಜಿ.ಪಿ. ಪಾಟೀಲ್, ಮಹಿಳಾ ಮಹಾಮಂಡಳದ ಅಧ್ಯಕ್ಷರಾದ ಶಕುಂತಲಾ ಕೆ. ಬೆಲ್ದಾಳೆ, ಬೆಂಗಳೂರು ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಡಿ. ಹನುಮಂತಯ್ಯ, ವಸತಿ ಮಹಾಮಂಡಳದ ಉಪಾಧ್ಯಕ್ಷರಾದ ಟಿ.ವಿ. ಶಿವಶಂಕರಪ್ಪ, ವಿವಿಧ ಮಹಾಮಂಡಳಗಳ ಅಧ್ಯಕ್ಷರುಗಳು ಭಾಗವಹಿಸಿದ್ದರು.

ಸಪ್ತಾಹ ಕಾರ್ಯಕ್ರಮದಲ್ಲಿ ಬೆಂಗಳೂರು ವಿಭಾಗದ 53 ಜನ ಸಹಕಾರಿಗಳೊಂದಿಗೆ ಪತ್ತಿನ ಸಹಕಾರ ಮಹಾಮಂಡಳದ ಉಪಾಧ್ಯಕ್ಷರಾದ ಶ್ರೀ ಕೆ. ಕೆ. ಮಹೇದ್ರಪ್ರಸಾದ್ ಗೌಡ, ನಿರ್ದೇಶ ಕರುಗಳಾದ ಶ್ರೀ ಡಿ. ಚನ್ನಯ್ಯ ಹಾಗೂ ಶ್ರೀ ಜಿ. ಮಲ್ಲಿಕಾರ್ಜನಯ್ಯ ಅವರುಗಳಿಗೆ 'ಸಹಕಾರ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆ ಅಡಿಯಲ್ಲಿ ನೋಂದಾವಣೆಯಾಗಿರುವ ಸದಸ್ಯರಿಗೆ ಸಾಂಕೇತಿಕವಾಗಿ ಗುರುತಿನ ಚೀಟಿಗಳನ್ನು ಗಣ್ಯರು ವಿತರಿಸಿದರು.



ಮಂಗಳೂರಿನಲ್ಲಿ 69ನೇ ಅಖಿಲ ಭಾರತ ಸಹಕಾರ ಸಪ್ತಾಹ

# ಹಾಲು ಉತ್ಪಾದಕ ಸಹಕಾರ ಸಂಘಗಳು ಮಹಿಳಾ ಸ್ವಾವಲಂಬನೆಗೆ ಪೂರಕ : ಎಸ್.ಟಿ. ಸೋಮಶೇಖರ್



**ಮಂಗಳೂರು :** ಈ ವರ್ಷ 3 ಲಕ್ಷ ಹೊಸ ರೈತರು ಸೇರಿದಂತೆ 33 ಲಕ್ಷ ರೈತರಿಗೆ ಶೂನ್ಯ ಮತ್ತು ರಿಯಾಯಿತಿ ಬಡ್ಡಿದರದಲ್ಲಿ 24 ಸಾವಿರ ಕೋಟಿ ರೂಪಾಯಿ ಸಾಲ ವಿತರಿಸಲಾಗುತ್ತಿದೆ, ಈಗಾಗಲೇ ಪ್ರಥಮ ಹಂತದಲ್ಲಿ 13 ಸಾವಿರ ಕೋಟಿ ರೂಪಾಯಿ ನೀಡಲಾಗಿದೆ. ಅದೇ ರೀತಿಯಾಗಿ ರಾಜ್ಯದಲ್ಲಿ 15 ಹಾಲಿನ ಒಕ್ಕೂಟಗಳಿದ್ದು ಅದರಲ್ಲಿ 25,500 ಲಕ್ಷ ಲೀ. ಹಾಲು ಸಂಗ್ರಹವಾಗುತ್ತದೆ. 9 ಲಕ್ಷ ಮಹಿಳೆಯರು ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದು, ಈ ಮೂಲಕ ಸ್ವಾವಲಂಬಿ ಬದುಕು ನಡೆಸುತ್ತಿದ್ದಾರೆ ಎಂದು ಸಹಕಾರ ಸಚಿವರಾದ ಎಸ್.ಟಿ. ಸೋಮಶೇಖರ್ ಅವರು ಹೇಳಿದರು.

ಅವರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ದ.ಕ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್, ಮಂಗಳೂರು ನೇತೃತ್ವದಲ್ಲಿ ದ.ಕ. ಮತ್ತು ಉಡುಪಿ ಜಿಲ್ಲಾ ಸಹಕಾರ ಯೂನಿಯನ್, ದ.ಕ. ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ, ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ ಮಂಗಳೂರು, ಸಹಕಾರ ಇಲಾಖೆ ಹಾಗೂ ದಕ್ಷಿಣ ಕನ್ನಡ ಮತ್ತು ಉಡುಪಿಯ ಕೃಷಿ ಪತ್ತಿನ ಸಹಕಾರ ಸಂಘಗಳು, ಪಟ್ಟಣ ಸಹಕಾರ ಬ್ಯಾಂಕ್ ಹಾಗೂ ವಿವಿಧ ಸಹಕಾರ ಸಂಘಗಳ ಸಹಯೋಗದೊಂದಿಗೆ ಮಂಗಳೂರಿನ ಕರಾವಳಿ ಉತ್ಸವ ಮೈದಾನದಲ್ಲಿ 18.11.2022ರಂದು ಆಯೋಜಿಸಿದ್ದ ರಾಜ್ಯ ಮಟ್ಟದ 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಅಧ್ಯಕ್ಷರು, ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಮಂಗಳೂರು ಇದರ ಅಧ್ಯಕ್ಷರಾದ ಡಾ। ಎಂ.ಎನ್. ರಾಜೇಂದ್ರ ಕುಮಾರ್ ಅವರು ಮಾತಾನಾಡಿ ಯಶಸ್ವಿನಿ ಯೋಜನೆಯನ್ನು ಮರುಜಾರಿಗೆಗೊಳಿಸಿದ






ಮುಖ್ಯಮಂತ್ರಿ, ಹಾಗೂ ಸಹಕಾರ ಸಚಿವರಿಗೆ ಧನ್ಯವಾದ ಹೇಳಬೇಕು. ಈ ಯೋಜನೆಯಿಂದ ರೈತರಿಗೆ ಬಹಳಷ್ಟು ಲಾಭವಾಗಲಿದೆ ಜಿಲ್ಲೆಯಲ್ಲಿ ಮೊಳಹಳ್ಳಿ ಶಿವರಾಯರ ಪರಿಶ್ರಮದಿಂದ ಇಂದು ಸಹಕಾರಿ ಕ್ಷೇತ್ರ ಇಷ್ಟೊಂದು ಗಟ್ಟಿಯಾಗಿ ನೆಲೆಯೂರಲು ಸಾಧ್ಯವಾಗಿದೆ ಎಂದರು.

ಶಾಸಕರಾದ ವೇದವ್ಯಾಸ್ ಕಾಮತ್‌ರವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದರು. ಶಾಸಕರಾದ ಯು.ಟಿ. ಖಾದರ್, ಮಂಗಳೂರು ಕ್ಯಾಂಪ್ಕೋ ಅಧ್ಯಕ್ಷರಾದ ಕಿಶೋರ್ ಕುಮಾರ್ ಕೊಡ್ಗಿ, ದ.ಕ. ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟದ ಅಧ್ಯಕ್ಷರಾದ ಕೆ.ಪಿ. ಸುಚರಿತ ಶೆಟ್ಟಿ, ದ.ಕ. ಮತ್ತು ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಮಹಾಮಂಡಳದ ಅಧ್ಯಕ್ಷರಾದ ಯಶ್‌ಪಾಲ್ ಎ. ಸುವರ್ಣ, ದ.ಕ. ಜಿಲ್ಲಾ ಸಹಕಾರಿ ಅಧ್ಯಕ್ಷ ಯೂನಿಯನ್ ಅಧ್ಯಕ್ಷರಾದ ಬೆಳ್ಳಿಪಾಡಿ ಪ್ರಸಾದ್ ಕೌಶಲ್ ಶೆಟ್ಟಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಬಿ. ಜಯಕರ್ ಶೆಟ್ಟಿ ಇಂದ್ರಾಳಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ನಿರ್ದೇಶಕರಾದ ಐಕಳಬಾವ ದೇವಿ ಪ್ರಸಾದ್ ಶೆಟ್ಟಿ ಬೆಳಪು, ಸಹಕಾರ ಸಂಘಗಳ ನಿಬಂಧಕರಾದ ಕ್ಯಾ. ಡಾ। ಕೆ. ರಾಜೇಂದ್ರ, ಪತ್ತಿನ ಮಹಾಮಂಡಳದ ನಿರ್ದೇಶಕರಾದ ಶ್ರೀ ಚಿತ್ರರಂಜನ್ ಬೋಳಾರ್, ಉಪನಿಬಂಧಕರಾದ ಲಕ್ಷ್ಮೀನಾರಾಯಣ್ ಜಿ.ಎನ್.,ದ.ಕ.ಹಾಲು ಉತ್ಪಾದಕರ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಡಾ। ಡಿ. ಅಶೋಕ್, ಅದಾನಿ ಗ್ರೂಪ್‌ನ ದಕ್ಷಿಣ ಭಾರತದ ಮುಖ್ಯಸ್ಥ ಕಿಶೋರ್ ಆಳ್ವ, ಎಸ್.ಸಿ.ಡಿ.ಸಿ.ಸಿ. ಬ್ಯಾಂಕ್ ಮುಖ್ಯಕಾರ್ಯನಿರ್ವಹಣಾಧಿಕಾರಿ(ಪ್ರ) ಕೆ. ಗೋಪಾಲ್‌ಕೃಷ್ಣ ಭಟ್, ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್‌ನ ಮುಖ್ಯಕಾರ್ಯನಿರ್ವಹಣಾಧಿಕಾರಿ ಪೂರ್ಣಿಮಾ ಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.



**ಸಹಕಾರ ರತ್ನ ಪ್ರಶಸ್ತಿ ಪ್ರದಾನ :** ಅವಿಭಜಿತ ಜಿಲ್ಲೆಯಲ್ಲಿ ಸಹಕಾರ ಕ್ಷೇತ್ರದಲ್ಲಿ ಅಮೂಲಾಗ್ರ ಸೇವೆ ಸಲ್ಲಿಸಿದ ಸಹಕಾರ ಧುರೀಣರಾದ ಕೋಂಕೋಡಿ ಪದ್ಮನಾಭ, ನಿತ್ಯಾನಂದ ಮುಂಡೋಡಿ, ದಂಬೆಕಾನ ಸದಾಶಿವ ರೈ, ಬಿ. ಜಯಕರ ಶೆಟ್ಟಿ ಇಂದ್ರಾಳಿ ಮತ್ತು ಯಶ್‌ಪಾಲ್ ಎ. ಸುವರ್ಣ ಇವರುಗಳಿಗೆ ರಾಜ್ಯ ಸರಕಾರವು ನೀಡುವ ಸಹಕಾರ ಕ್ಷೇತ್ರದ ಪ್ರತಿಷ್ಠಿತ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು ಹಾಗೂ ಉತ್ತಮ ಸಾಧನೆಗೈದ ಸಂಘ–ಸಂಸ್ಥೆಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಇದೇ ಸಂದರ್ಭದಲ್ಲಿ ದ.ಕ. ಹಾಲು ಒಕ್ಕೂಟ ಹೊರತಂದಿರುವ ಸ್ಪೈಸಿ ಮಜ್ಜಿಗೆ ಹಾಗೂ ಬೆಣ್ಣೆಯನ್ನು ಸಚಿವರು ಬಿಡುಗಡೆ ಮಾಡಿದರು.

## ಚಿಕ್ಕಮಗಳೂರಿನಲ್ಲಿ 69ನೇ ಅಖಿಲ ಭಾರತ ಸಹಕಾರ ಸಪ್ತಾಹ

# ರಾಜ್ಯದ ಆರ್ಥಿಕ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರ : ಶಾಸಕ ಡಿ.ಎಸ್. ಸುರೇಶ್



**ಚಿಕ್ಕಮಗಳೂರು :** ಸಹಕಾರ ಸಂಸ್ಥೆಗಳನ್ನು ಬಲಪಡಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿವೆ. ದೇಶ ಮತ್ತು ರಾಜ್ಯದ ಆರ್ಥಿಕತೆಯನ್ನು ಬಲಪಡಿಸುವಲ್ಲಿ ಸಹಕಾರ ಕ್ಷೇತ್ರದ ಕೊಡುಗೆ ಅಪಾರ. ರೈತಾಪಿ ವರ್ಗಕ್ಕೆ ಸಾಲಸೌಲಭ್ಯ ನೀಡುವಲ್ಲಿ ಸಹಕಾರ ಸಂಸ್ಥೆಗಳು ಪ್ರಮುಖ ಪಾತ್ರ ವಹಿಸುತ್ತಿವೆ.

ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಮುಖಾಂತರ ಅಕ್ಟೋಬರ್ ತಿಂಗಳ ಅಂತ್ಯಕ್ಕೆ 41180 ಜನ ರೈತರಿಗೆ ರೂ. 665 ಕೋಟಿ ಸಾಲ ಸೌಲಭ್ಯವನ್ನು ಒದಗಿಸಲಾಗಿದೆ 2021–22ನೇ ಸಾಲಿನಲ್ಲಿ ರೂ 5.84 ಕೋಟಿ ಲಾಭ ಗಳಿಸಿದೆ ಎಂದು ಶಾಸಕರು ಹಾಗೂ ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಬ್ಯಾಂಕಿನ ಅಧ್ಯಕ್ಷರಾದ ಡಿ.ಎಸ್. ಸುರೇಶ್ ರವರು ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಇವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಸಹಕಾರ ಕುಕ್ಕುಟ ಮಹಾಮಂಡಳ, ಕರ್ನಾಟಕ ರಾಜ್ಯ ಉಣ್ಣೆ ಕೈಮಗ್ಗ ನೇಕಾರರ ಸಹಕಾರ ಮಹಾಮಂಡಳ, ಚಿಕ್ಕಮಗಳೂರು ಜಿಲ್ಲಾ ಸಹಕಾರ ಯೂನಿಯನ್, ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಹಾಸನ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ಹಾಗೂ ಚಿಕ್ಕಮಗಳೂರು ಜಿಲ್ಲೆಯ ವಿವಿಧ ರೀತಿಯ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖೆ ಇವರುಗಳ ಸಹಯೋಗದೊಂದಿಗೆ 69ನೇ ಅಖಿಲ ಭಾರತ ಸಹಕಾರ ಸಪ್ತಾಹದ "ಆವಿಷ್ಕಾರ ಪೋಷಣೆ, ಸ್ಟಾರ್ಟ್‌ಆಪ್‌ಗಳಿಗೆ ಉತ್ತೇಜನ ಮತ್ತು ತಂತ್ರಜ್ಞಾನದ ಉನ್ನತೀಕರಣದಲ್ಲಿ ಸಹಕಾರ ಸಂಸ್ಥೆಗಳ ಪಾತ್ರ" ದಿನದ ರಾಜ್ಯ ಮಟ್ಟದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕರಾದ ಟಿ.ಡಿ. ರಾಜೇಗೌಡ ಇವರು ಸಹಕಾರ ಪಿತಾಮಹರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಮಾತನಾಡಿ ಎಲ್ಲರಿಗಾಗಿ ನಾನು, ನನಗಾಗಿ ಎಲ್ಲರು ಎನ್ನುವ ಶ್ರೇಷ್ಠ ಸಹಕಾರ ತತ್ವದ ಬುನಾದಿ ಮೇಲೆ ಸಹಕಾರ ಕ್ಷೇತ್ರ ನಿಂತಿದೆ ಅದು ಕೃಷಿ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದಿದೆ, ರಾಜ್ಯದ ಜನಸಂಖ್ಯೆಯ ಸುಮಾರು 2.5 ಕೋಟಿ ಜನ ಸಹಕಾರ ಕ್ಷೇತ್ರದ ಸದಸ್ಯರಾಗಿದ್ದು, ಈ ಪೈಕಿ ಶೇ.40 ಮಹಿಳೆಯರು ಸೇರಿದ್ದು ಆರ್ಥಿಕವಾಗಿ ಸ್ವಾವಲಂಬಿಗಳಾಗಿದ್ದಾರೆ. ಸ್ಥಗಿತಗೊಂಡಿದ್ದ ಯಶಸ್ವಿನಿ ಯೋಜನೆಯನ್ನು ಸರ್ಕಾರವು ಮರು ಜಾರಿಗೊಳಿಸುವ ಮೂಲಕ ರೈತ ಕುಟುಂಬಗಳಿಗೆ ನೆರವಾಗಿರುವುದು ಅಭಿನಂದನಾರ್ಹ, ದೇಶದ ಸಣ್ಣ ಸಣ್ಣ ಹಿಡುವಳಿದಾರರನ್ನು ಒಗ್ಗೂಡಿಸಿ ಇಸ್ರೇಲ್ ಮಾದರಿ ಯಾಂತ್ರೀಕರಣದ ಕೃಷಿ ಮಾಡಿದರೆ ದೇಶದ ಪ್ರಗತಿಗೆ ಪೂರಕವಾಗುತ್ತದೆ ಎಂದರು.

ಸಮಾರಂಭದಲ್ಲಿ ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಯ 2021–22ನೇ ಸಾಲಿನ ಸಹಕಾರ ರತ್ನ ಪ್ರಶಸ್ತಿಯನ್ನು ಕೆ.ಎಂ. ಶ್ರೀನಿವಾಸ್ ಹಾಗೂ ಸಿ.ಎನ್. ಬಾಲಕೃಷ್ಣ ಇವರಿಗೆ ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ರಚನಾತ್ಮಕವಾಗಿ ಅಭಿವೃದ್ಧಿ ಹೊಂದಿರುವ ವಲಯವಾರು ಸಹಕಾರ ಸಂಘಗಳನ್ನು



ಗುರುತಿಸಿ ಸನ್ಮಾನಿಸಲಾಯಿತು. ಬಿ.ಸಿ. ಲೋಕಪ್ಪಗೌಡ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಇವರು ಹಾಗೂ ವೇದಿಕೆಯಲ್ಲಿ ಎಲ್ಲಾ ಗಣ್ಯರು ಸನ್ಮಾನ ಕಾರ್ಯಕ್ರಮವನ್ನು ನೆರವೇರಿಸಿಕೊಟ್ಟರು.

ಪ್ರಾರಂಭದಲ್ಲಿ ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನಿಂದ ಒಕ್ಕಲಿಗರ ಸಮುದಾಯ ಭವನದವರೆಗೆ ಸಹಕಾರ ಜಾಥ ನಡೆಸಲಾಯಿತು ಜಾಥಾದಲ್ಲಿ ವೀರಗಾಸೆ, ಡೊಳ್ಳುಕುಣಿತ, ಲಂಬಾಣಿ ಸಾಂಪ್ರದಾಯಿಕ ನೃತ್ಯ ಕಲಾತಂಡಗಳು ಭಾಗವಹಿಸಿದ್ದವು. ಡಾ॥ ಜಿ.ಎಸ್. ಮಹಾಬಲ ಅಧ್ಯಕ್ಷರು, ಜಿಲ್ಲಾ ಸಹಕಾರ ಯೂನಿಯನ್ ನಿ., ಚಿಕ್ಕಮಗಳೂರು ಇವರ ಧ್ವಜಾರೋಹಣ ನೆರವೇರಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಅಧ್ಯಕ್ಷರಾದ ವಹಿಸಿದ್ದ ಜಿ. ನಂಜನಗೌಡ ಅವರು ವಹಿಸಿದ್ದರು. ಇವರು ಮಾತನಾಡುತ್ತ ಸಹಕಾರ ಚಳವಳಿ ಕಳೆದ 118 ವರ್ಷಗಳಲ್ಲಿ ಬೃಹದಾಕಾರವಾಗಿ ಬೆಳೆದು ಇಂದಿನ ತಾಂತ್ರಿಕತೆ, ಬೌಧಿಕ ಮಟ್ಟವನ್ನು ಉಪಯೋಗಿಸಿಕೊಂಡು ಸಹಕಾರ ಕ್ಷೇತ್ರದಲ್ಲಿ ಸಾಕಷ್ಟು ಆವಿಷ್ಕಾರಗಳಾಗಿವೆ. ಕೃಷಿ, ಶಿಕ್ಷಣ, ಉದ್ಯೋಗ, ಕೈಗಾರಿಕೆ, ಸ್ವಯಂ ಉದ್ಯೋಗ ಮುಂತಾದ ರಂಗಗಳು ಸಹಕಾರ ಕ್ಷೇತ್ರದಲ್ಲಿ ಒಳಗೊಂಡು ಅಭಿವೃದ್ಧಿಯಾದರೆ ಈ ದೇಶದ ಸರ್ವತೋಮುಖ ಅಭಿವೃದ್ಧಿಯಾಗುತ್ತದೆ ಎಂದರು.

ಸಮಾರಂಭದಲ್ಲಿ ವೈ.ವಿ. ಗುಂಡೂರಾವ್, ಸಹಪ್ರಧಾನ ವ್ಯವಸ್ಥಾಪಕರು ನಿವೃತ್ತ, ನಬಾರ್ಡ್, ಬೆಂಗಳೂರು ಇವರು ದಿನದ ಮಹತ್ವದ ಕುರಿತು ಉಪನ್ಯಾಸ ನೀಡಿದರು. ಸಮಾರಂಭದಲ್ಲಿ ಸಿ.ಎಸ್. ವರಸಿದ್ಧಿ ವೇಣುಗೋಪಾಲ್, ಅಧ್ಯಕ್ಷರು, ಚಿಕ್ಕಮಗಳೂರು ನಗರ ಸಭೆ, ನಿರ್ದೇಶಕರು, ಜಿಲ್ಲಾ ಸಹಕಾರ ಯೂನಿಯನ್, ಚಿಕ್ಕಮಗಳೂರು, ಸಿದ್ದಪ್ಪ ಅಂಬಲಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಉಣ್ಣೆ, ಕೈಮಗ್ಗ ನೇಕಾರರ ಮಹಾಮಂಡಳ, ಬೆಂಗಳೂರು, ಬಿ.ಎನ್. ಮುತ್ತಪ್ಪ, ಅಧ್ಯಕ್ಷರು, ಕರ್ನಾಟಕ ರಾಜ್ಯ ಲ್ಯಾಂಪ್ಸ್ ಸಹಕಾರ ಮಹಾಮಂಡಳ., ಮೈಸೂರು, ಭಾರತಿಭಟ್, ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ, ಬೆಂಗಳೂರು, ಈಶ್ವರಹಳ್ಳಿ ಮಹೇಶ್, ನಿರ್ದೇಶಕರು, ಕಾಸ್ಕಾರ್ಡ್ ಬ್ಯಾಂಕ್ ನಿ., ಬೆಂಗಳೂರು, ಹೆಚ್.ಕೆ. ದಿನೇಶ್, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ಬೆಂಗಳೂರು, ಜಿಲ್ಲಾ ಕೇಂದ್ರ ಬ್ಯಾಂಕಿನ ಉಪಾಧ್ಯಕ್ಷರಾದ ಟಿ.ಎಲ್. ರಮೇಶ್, ಜಿಲ್ಲಾ ಸಹಕಾರ ಯೂನಿಯನ್ನಿನ ಉಪಾಧ್ಯಕ್ಷರಾದ ಜಿ.ಕೆ. ದಿವಾಕರ, ಡಿ.ಸಿ.ಸಿ. ಬ್ಯಾಂಕಿನ ನಿರ್ದೇಶಕರಾದ ಕೆ.ಆರ್. ಆನಂದಪ್ಪ, ಹೆಚ್.ಬಿ. ಶಿವಣ್ಣ, ಎಸ್.ಎನ್. ರಾಮಸ್ವಾಮಿ, ಎಸ್.ಜಿ. ರಾಮಪ್ಪ, ಡಿ.ಸಿ. ಶಂಕರಪ್ಪ, ಹೆಚ್.ವಿ. ಸಂದೀಪ್‌ಕುಮಾರ್, ಎಂ. ಪರಮೇಶ್ವರಪ್ಪ, ಎಂ.ಎಸ್. ನಿರಂಜನ್, ಹೆಚ್.ಬಿ. ಸತೀಶ್, ಎಸ್.ವಿ. ಬಸವರಾಜಪ್ಪ, ಕೆ. ಗಿರೀಶ್ ಚವ್ಹಾಣ್, ಜಿಲ್ಲಾ ಸಹಕಾರ ಯೂನಿಯನ್ನಿನ ನಿರ್ದೇಶಕರಾದ ಕು॥ ಬಿ.ಸಿ. ಗೀತಾ, ಕೆ.ಟಿ. ವೆಂಕಟೇಶ್, ಹೆಚ್.ಎಸ್. ಇನೇಶ್, ಜಿ.ವಿ. ಮೋಹನ್, ಸಿ.ಹೆಚ್. ಕುಶಕುಮಾರ್, ಪಿ. ಶಶಿಕುಮಾರ್. ಬಿ.ಟಿ. ರಾಮಚಂದ್ರಪ್ಪ, ಹಾಸನ ಹಾಲು ಒಕ್ಕೂಟದ ನಿರ್ದೇಶಕರಾದ ಕೆ.ಟಿ. ಜಗದೀಶ್, ಚೈತ್ರ, ಎಸ್. ಅರಳಿ ಸೂರ್ಯಕಾಂತ್, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಪ್ರಸಾದ್ ರೆಡ್ಡಿ, ಸಹಕಾರ ಸಂಘಗಳ ಜಂಟಿ ನಿಬಂಧಕರು, ಡಾ॥ ಜಿ. ಉಮೇಶ್, ಸಹಕಾರ ಸಂಘಗಳ ಜಂಟಿ ನಿಬಂಧಕರು, ಮೈಸೂರು ಪ್ರಾಂತ, ಶರಣಗೌಡ ಜಿ. ಪಾಟೀಲ್, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ, ಬೆಂಗಳೂರು, ಎಸ್.ಜಿ. ಬಂಟ್, ಸಹಕಾರ ಸಂಘಗಳ ಉಪನಿಬಂಧಕರು, ಚಿಕ್ಕಮಗಳೂರು, ಕೆ. ಗೋಪಾಲಯ್ಯ, ವ್ಯವಸ್ಥಾಪಕ ನಿರ್ದೇಶಕರು, ಹಾಲು ಒಕ್ಕೂಟ ನಿ., ಹಾಸನ ಇವರುಗಳು ಉಪಸ್ಥಿತರಿದ್ದರು. ಮೊದಲಿಗೆ ರೇಖಾ ಪ್ರೇಮಕುಮಾರ್ ತಂಡದಿಂದ ಸುಗಮಸಂಗೀತ ಕಾರ್ಯಕ್ರಮ ಪ್ರಸ್ತುತಪಡಿಸಿ ಪ್ರಾರ್ಥನೆ ಮಾಡಿದರು. ಡಾ॥ ಜಿ.ಎಸ್. ಮಹಾಬಲ ಅಧ್ಯಕ್ಷರು, ಜಿಲ್ಲಾಸಹಕಾರ ಯೂನಿಯನ್ ಇವರು ಎಲ್ಲಾ ಗಣ್ಯರನ್ನು ಸ್ವಾಗತಿಸಿದರು. ಸುಮಾಪ್ರಸಾದ್ ಕಾರ್ಯಕ್ರಮ ನಿರೂಪಿಸಿದರು.

# ಬೆಳಗಾವಿಯಲ್ಲಿ 69ನೇ ಅಖಿಲ ಭಾರತ ಸಹಕಾರ ಸಪ್ತಾಹ

## ಗ್ರಾಮೀಣರ ಆರ್ಥಿಕ ಸದೃಢತೆಗೆ ಸಹಕಾರ : ಸಂಸದ ಈರಣ್ಣ ಕಡಾಡಿ



**ಬೆಳಗಾವಿ :** ಗ್ರಾಮೀಣ ಜನರ ಆರ್ಥಿಕ ಸ್ವಾವಲಂಬನೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಹಕಾರ ಸಂಘಗಳು ಪ್ರಾರಂಭವಾಗಿವೆ. ರೈತಾಪಿ ವರ್ಗದವರಿಗೆ ಸಾಲ ವಿತರಣೆ ಮೂಲಕ ನೆರವು ನೀಡಿವೆ. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರೂ ನಾಡಿನ ಸಹಕಾರ ಸಂಘಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳ ಇವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್, ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್, ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಬೆಳಗಾವಿ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ, ಬೆಳಗಾವಿ ಜಿಲ್ಲಾ ಸಹಕಾರ ಯೂನಿಯನ್, ಬೆಳಗಾವಿ ಜಿಲ್ಲೆಯ ಎಲ್ಲ ರೀತಿಯ ಸಹಕಾರ ಸಂಘಗಳು, ಪಟ್ಟಣ ಸಹಕಾರ ಬ್ಯಾಂಕುಗಳು. ಸೌಹಾರ್ದ ಸಹಕಾರ ಬ್ಯಾಂಕುಗಳು/ ಸಂಘಗಳು ಹಾಗೂ ಸಹಕಾರ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದಲ್ಲಿ ಹಮ್ಮಿಕೊಚಿಳ್ಳಲಾದ 69ನೇ ಅಖಿಲ ಭಾರತ ಸಹಕಾರ ಸಪ್ತಾಹ–2022ರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರ ಸಂಘಗಳು ಗ್ರಾಮೀಣ ಮಟ್ಟದ ರೈತರ, ಕೂಲಿ ಕಾರ್ಮಿಕರ, ಬಡತನ ರೇಖೆಗಿಂತ ಕೆಳಗಿನವರಿಗೆ ಆರ್ಥಿಕ ಸೌಲಭ್ಯಗಳನ್ನು ನೀಡುತ್ತಿವೆ ಎಂದು ಹೇಳಿದರು.

**ಬೆಳಗಾವಿ ವಸತಿ ಶಾಲೆ, ಆಸ್ಪತ್ರೆಗಳ ನಿರ್ವಹಣೆ:** ಹಾಲು ಉತ್ಪಾದಕರಿಗೆ ಯೋಗ್ಯ ಬೆಲೆ ನೀಡಲು, ಹಾಲು ಸಂಗ್ರಹಿಸಲು ಉತ್ತಮ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ. ಅಷ್ಟೇ ಅಲ್ಲದೇ ಜಿಲ್ಲೆಯಲ್ಲಿ ವಿಶಿಷ್ಟವಾದ ಹುಕ್ಕೇರಿ ತಾಲೂಕಿನ ಗ್ರಾಮೀಣ ವಿದ್ಯುತ್ ಸಹಕಾರ ಸಂಘ, ಚಂದರಗಿ ಸಹಕಾರ ಕ್ರೀಡಾ ವಸತಿ ಶಾಲೆ, ಘಟಪ್ರಭಾದ ಸಹಕಾರ ಆಸ್ಪತ್ರೆಗಳು ಸಹಕಾರ ಕ್ಷೇತ್ರದ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಹುಕ್ಕೇರಿ ಗ್ರಾಮೀಣ ವಿದ್ಯುತ್ಚ್ಛಕ್ತಿ ಸಹಕಾರ ಸಂಘವು ರೂ. 9.31 ಕೋಟಿ ಷೇರು ಬಂಡವಾಳ ಮತ್ತು ರೂ. 19.64ಕೋಟಿ ದುಡಿಯುವ ಬಂಡವಾಳದೊಂದಿಗೆ ಹುಕ್ಕೇರಿ ತಾಲೂಕಿನ 123 ಗ್ರಾಮಗಳಿಗೆ ವಿದ್ಯುತ್ ವಿತರಣೆ ಮಾಡುತ್ತ ಹೆಸ್ಕಾಂ ಸಂಸ್ಥೆಗೆ ಪರ್ಯಾಯವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ 595 ಕೋಟಿ ಲೀಟರ್ ಎಥೆನಾಲ್ ಉತ್ಪಾದನೆಗೆ ಅವಕಾಶ ಕೊಟ್ಟಿದೆ. ಇದರಿಂದ ಸಕ್ಕರೆ ಕಾರ್ಖಾನೆಗಳಲ್ಲಿ ಎಥೆನಾಲ್ ಉತ್ಪಾದನೆಗೆ ಅವಕಾಶ ವೃದ್ಧಿಸಿದೆ. ಬೆಳಗಾವಿಯಲ್ಲಿ ಸಹಕಾರಿ ಸಕ್ಕರೆ ಕಾರ್ಖಾನೆಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ಎಥೆನಾಲ್, ಡಿಸ್ಟಿಲರಿ ಮತ್ತಿತರ ಉಪ ಉತ್ಪನ್ನಗಳಿಂದ ಬರುವ ಶೇ.70ರಷ್ಟು ಆದಾಯವನ್ನು ಕಬ್ಬು ಬೆಳೆಗಾರರಿಗೆ ನೀಡಬೇಕು ಎಂದರು.

ವಸ್ತು ಪ್ರದರ್ಶನದ ಮಳಿಗೆ ಉದ್ಘಾಟಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಉಪಾಧ್ಯಕ್ಷರಾದ ಜಗದೀಶ ಕವಟಗಿಮಠ ರವರು ಮಾತನಾಡಿ, ವಿವಿಧ ಕಾರಣಗಳಿಂದ ಸಹಕಾರ ಕ್ಷೇತ್ರ ಈಗ ವಿಶ್ವಾಸಾರ್ಹತೆ ಕಳೆದುಕೊಳ್ಳುತ್ತಿದೆ. ಇದನ್ನು ಪುನರ್ ಸ್ಥಾಪಿಸುವ ಸಲುವಾಗಿ ಅಗತ್ಯ ಕ್ರಮ ತೆಗೆದುಕೊಳ್ಳಬೇಕಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ ಅವರು ಮಾತನಾಡಿ, ತಾಲೂಕಾ ಮಟ್ಟದಲ್ಲಿ ಸಹಕಾರ ಸಂಘಗಳ ಸಾಲಸೌಲಭ್ಯ ಪ್ರತಿ ರೈತನಗೂ ದೊರೆಯಬೇಕು. ಅರ್ಹರು ಸೌಲಭ್ಯಗಳಿಂದ ವಂಚಿತರಾಗಬಾರದು ಎಂದು ಸಲಹೆ ಮಾಡಿದರು.

ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ರಮೇಶ ಕತ್ತಿ ರವರು ಯಶಸ್ವಿನಿ ಕಾರ್ಡ್‌ಗಳನ್ನು ಸದಸ್ಯರಿಗೆ ಸಾಂಕೇತಿಕವಾಗಿ





## ಸಹಕಾರ ರತ್ನ ಪ್ರಶಸ್ತಿ ಪ್ರದಾನ

ಬೆಳಗಾವಿ, ಬಾಗಲಕೋಟೆ, ವಿಜಯಪುರ ಜಿಲ್ಲೆಗಳಶ್ರೇಷ್ಠ ಸಹಕಾರಿಗಳಿಗೆ ಸಹಕಾರ ರತ್ನ ಪ್ರಶಸ್ತಿಪ್ರದಾನ ಮಾಡಲಾಯಿತು.

ಬೆಳಗಾವಿ ಜಿಲ್ಲೆಯಿಂದ ಅರವಿಂದ ಪಾಟೀಲ, ಆಶಾ ಪ್ರಭಾಕರ ಕೋರೆ, ಕುಮಾರ ಬದನೆಕಾಯಿ, ಮಲ್ಲಿಕಾರ್ಜುನ ಚುನಮರಿ, ಅನಿಲ ಪಾಟೀಲ, ಬಾಗಲಕೋಟೆ ಜಿಲ್ಲೆಯ ಚಂದ್ರಶೇಖರ ಜಿಗಜಿನ್ನಿ, ಅರವಿಂದ ಮಂಗಳೂರು, ವಿಜಯಪುರ ಜಿಲ್ಲೆಯಿಂದ ವಿಠ್ಠಲಸಿಂಗ ಅಮರಸಿಂಗ್ ಹಜೇರಿ, ಮಲ್ಲಮ್ಮ ಯಾಳವಾರ ಅವರಿಗೆ ಪ್ರಶಸ್ತಿಪ್ರದಾನ ಮಾಡಲಾಯಿತು.





ವಿತರಿಸಿದರು. ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ಎಸ್. ಪರಮಶಿವಯ್ಯ ಸಹಕಾರ ಪತ್ರಿಕೆ ಬಿಡುಗಡೆಗೊಳಿಸಿದರು. ಉತ್ತರ ಕ್ಷೇತ್ರದ ಶಾಸಕ ಅನಿಲ್ ಬೆನಕೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಹಕಾರ ಸಂಘಗಳ ನಿವೃತ್ತ ಅಪರ ನಿಬಂಧಕರು ಹೆಚ್.ಎಸ್. ನಾಗರಾಜಯ್ಯ ಉಪನ್ಯಾಸ ನೀಡಿದರು.

ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಈರಣ್ಣಾ ಚ. ಪಟ್ಟಣಶೆಟ್ಟಿ, ಬಸವರಾಜ ನಿ. ಅರಬಗೊಂಡ, ಬಾಪುಗೌಡ ಪಾಟೀಲ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿರ್ದೇಶಕರಾದ ಡಿ.ಟಿ. ಪಾಟೀಲ, ಬಸವರಾಜ ಈ. ಕಲ್ಯಾಣಶೆಟ್ಟಿ, ಬೆಳಗಾವಿ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾದ ಬಿ. ಡಿ. ಪಾಟೀಲ, ಉಪಾಧ್ಯಕ್ಷ ಬಿ. ಎನ್. ಉಳ್ಳಾಗಡ್ಡಿ ಹಾಗೂ ನಿರ್ದೇಶಕರಾದ ಬಸವರಾಜ ಸಿ. ಸುಲ್ತಾನಪುರಿ, ಕಿಶೋರ ಮ. ಬಡಗಾಂವಿ, ಗುರುನಾಥ ಲ. ಕಂಕಣವಾಡಿ, ಈಶ್ವರಚಂದ್ರ ಬ. ಇಂಗಳಗಿ, ರಮೇಶ ಬ. ಕೋಟಗಿ, ಉಮೇಶ ಬ. ಪಾಟೀಲ, ಮಲ್ಲನಗೌಡ ಚ. ಗೌಡತಿ, ವರ್ಧಮಾನ ಗು. ಬೋಳಿ, ಮಾರುತಿ ದೊ. ಕರಿಗಾರ, ಜಯಕುಮಾರ ಲ. ದೇಸಾಯಿ, ಪತ್ತಿನ ಸಹಕಾರ ಮಹಾಮಂಡಳದ ನಿರ್ದೇಶಕರಾದ ಶ್ರೀ ಉಮೇಶ್ ಶಿ. ಬಾಳಿ, ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಎಸ್. ಅರಳಿ ಸೂರ್ಯಕಾಂತ, ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು ಜಿ. ಎಮ್. ಪಾಟೀಲ, ಹುಕ್ಕೇರಿ ಗ್ರಾಮೀನ ವಿದ್ಯುತ್ ಸಹಕಾರ ಸಂಘ ವ್ಯವಸ್ಥಾಪಕ ನಿರ್ದೇಶಕ ಕೆ.ಎಲ್. ಶ್ರೀನಿವಾಸ, ಸಹಕಾರ ಸಂಘಗಳ ಉಪನಿಬಂಧಕರಾದ ಮಣಿ ಎಂ.ಎನ್., ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಕೆ. ಅಳಗುಂಡಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪುಂಡಲೀಕ ಎನ್. ಕೇರೂರೆ, ಬೆಳಗಾವಿ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸನ್ ಜಿ., ಎಸ್. ಎಸ್. ಮುಗಳಿ ಉಪಸ್ಥಿತರಿದ್ದರು.

# ಗ್ರಾಮೀಣ ಅಭಿವೃದ್ಧಿಗೆ ಸಹಕಾರವೇ ಶಕ್ತಿ : ಸಚಿವ ಹಾಲಪ್ಪ



**ಧಾರವಾಡ :** ರಾಜ್ಯ ರಾಷ್ಟ್ರದ ಅಭಿವೃದ್ಧಿಯಲ್ಲಿ ಸಹಕಾರ ಚಳವಳಿ ಮಾತ್ರ ಮಹತ್ವದ್ದಾಗಿದೆ. ಸಹಕಾರ ಮಹಾಮಂಡಳಗಳು, ಒಕ್ಕೂಟಗಳು, ಸಂಘಗಳು ಪ್ರಾಮಾಣಿಕತೆ, ಪಾರದರ್ಶಕತೆ ಹಾಗೂ ದಕ್ಷತೆಯಿಂದ ಕಾರ್ಯನಿರ್ವಹಿಸಬೇಕೆಂದು ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಹಾಲಪ್ಪ ಆಚಾರ ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಧಾರವಾಡ ಜಿಲ್ಲಾ ಸಹಕಾರ ಯೂನಿಯನ್, ಕೆ.ಸಿ.ಸಿ. ಬ್ಯಾಂಕ, ಧಾರವಾಡ ಸಹಕಾರ ಹಾಲು ಒಕ್ಕೂಟ, ಜಿಲ್ಲೆಯ ಎಲ್ಲ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖೆ, ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾದ 69ನೇ ಅಖಿಲ ಭಾರತ ಸಹಕಾರ ಸಪ್ತಾಹದ "ಸಹಕಾರ ಮಾರುಕಟ್ಟೆ, ಗ್ರಾಹಕ ರೂಪಾಂತರ ಮತ್ತು ಮೌಲ್ಯವರ್ಧನೆ" ದಿನದ ಆಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಅಭಿವೃದ್ಧಿಗೆ ಸಹಕಾರವೇ ಶಕ್ತಿ, ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎನ್ನುವ ತತ್ವದ ಅಧಾರದ ಮೇಲೆ ರೈತರು ಹಾಗೂ ಮಹಿಳೆಯರ ಆರ್ಥಿಕ ಸ್ವಾವಲಂಬನೆಯಲ್ಲಿ ಸಹಕಾರ ಸಂಸ್ಥೆಗಳ ಮಹತ್ವದ ಪಾತ್ರ ವಹಿಸುತ್ತವೆ ಎಂದರು. 32 ಲಕ್ಷ ರೈತರಿಗೆ 24 ಸಾವಿರ ಕೋಟಿ ರೂ. ಸಾಲ ನೀಡುವುದಾಗಿ ಮುಖ್ಯ ಮಂತ್ರಿಗಳು ಈಗಾಗಲೇ ಗೋಷಿಸಿದ್ದಾರೆ. ಸಹಕಾರ ಕ್ಷೇತ್ರದಲ್ಲಿ ಧಾರವಾಡ ಸಹಕಾರ ಒಕ್ಕೂಟ ತನ್ನ ಛಾಪು ಮೂಡಿಸಿದ್ದು, ಈಗ 150 ಉತ್ಪನ್ನಗಳನ್ನು ಹೊರ ತಂದಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಧಾರವಾಡ ಗ್ರಾಮೀಣ ಶಾಸಕರಾದ ಅಮೃತ ದೇಸಾಯಿ ಅವರು ಪ್ರಾಮಾಣಿಕತೆ ಶ್ರದ್ಧೆಯಿಂದ ಸಹಕಾರ ಕ್ಷೇತ್ರವನ್ನು ಬೆಳೆಸಬಹುದೆನ್ನಲು ಧಾರವಾಡ ಸಹಕಾರ ಹಾಲು ಒಕ್ಕೂಟ ಉತ್ತಮ ಉದಾಹರಣೆ. ನಗರ, ಪಟ್ಟಣ ಮತ್ತು ಹಳ್ಳಿಗಳಲ್ಲಿ ಈ ಹಿಂದೆ ವಿವಿಧ ವಿದೇಶಿ ತಂಪು ಪಾನಿಯಗಳ ಜಾಹಿರಾತು ರಾರಾಜಿಸುತ್ತಿದ್ದವು. ಆದರೆ ಈಗ ನಂದಿನಿ ಉತ್ಪನ್ನಗಳ ಜಾಹಿರಾತು ಎಲ್ಲೆಡೆ ಕಾಣುತ್ತಿವೆ ಎಂದರು. ಮತ್ತೋರ್ವ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಲಘಟಗಿ ಶಾಸಕರಾದ ಸಿ.ಎಂ. ನಿಂಬಣ್ಣವರ ಮಾತನಾಡಿ, ಸಹಕಾರ ಆಂದೋಲನ 12ನೇ ಶತಮಾನದಲ್ಲೆ ಪ್ರಾರಂಭಿಸಲಾಗಿದೆ. ಸರ್ವೇಜನ ಸುಖಿನೋಭವಂತು ಎನ್ನುವಂತೆ ಕಾಯಕವೇ ಮೂಲವಾಗಿ ಪ್ರಾಮಾಣಿಕತೆ ದಕ್ಷತೆಯಿಂದ ಸಹಕಾರ ಕ್ಷೇತ್ರವನ್ನು ಬೆಳೆಸಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಅಜ್ಜಪ್ಪ ಹೊರಕೇರಿ, ಪ್ರತಾಪ್ ಅರ್ಜುನರಾವ ಚವ್ಹಾಣ, ಎಸ್.ಎಸ್. ದೇಸಾಯಿ, ರುದ್ರಗೌಡ ಮಹಾರುದ್ರಾಗೌಡ ಸರನಾಡಗೌಡ, ಬಸವರಾಜ ನೀಲಪ್ಪ ಅರಬಗೊಂಡ, ಮೃತ್ಯುಂಜಯ (ಮುತ್ತಣ್ಣ) ಚನ್ನಬಸಪ್ಪ ಯಲಿಗಾರ, ರತ್ನಾಕರ ತಿ ಕುಂದಾಪುರ, ಚನ್ನಬಸಪ್ಪ ಕಳಕಪ್ಪ ಮಾಳಶೆಟ್ಟಿ, ವಿಷ್ಣು ನಾರಾಯಣ ಭಟ್ಟ ಅಳ್ಳಂಕಿ ಸೇರಿದಂತೆ 11 ಜನ ಸಾಧಕರುಗಳಿಗೆ ಸಹಕಾರ ರತ್ನ ಪ್ರಶಸ್ತಿ ಪ್ರಧಾನ ಮಾಡಲಾಯಿತು.







## ಸಚಿವರಿಂದ ಗೋಪೂಜೆ

ಕಾರ್ಯಕ್ರಮಕ್ಕೂ ಮುನ್ನ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಹಾಲಪ್ಪ ಆಚಾರ ಅವರು ಗೋ ಪೂಜೆ ನೆರವೇರಿಸಿದರು. ಕಲಘಟಗಿ ಶಾಸಕರಾದ ಸಿ.ಎಂ. ನಿಂಬಣ್ಣವರ ಸಹಕಾರ ಧ್ವಜಾರೋಹಣ ನೆರವೇರಿಸಿದರು. ಕರ್ನಾಟಕ ಸಹಕಾರ ಹಾಲು ಮಹಾಮಂಡಳದ ನಿವೃತ್ತ ನಿರ್ದೇಶಕ ಮತ್ತು ಪ್ರಸ್ತುತ ಸಲಹೆಗಾರರಾದ ಡಾ. ಡಿ.ಎನ್. ಹೆಗಡೆ ವಿಶೇಷ ಉಪನ್ಯಾಸ ನೀಡಿದರು. ಮಹಾತ್ಮಾ ಗಾಂಧಿಜಿ, ಸಹಕಾರ ಪಿತಾಮಹ ಶಿದ್ದನಗೌಡ ಸಣ್ಣರಾಮನಗೌಡ ಪಾಟೀಲ, ಕ್ಷೀರ ಪಿತಾಮಹ ಡಾ. ವರ್ಗಿಸ್ ಕುರಿಯನ್ ಹಾಗೂ ಎಂ.ವ್ಹಿ. ಕೃಷ್ಣಪ್ಪ ಅವರ ಭಾವಚಿತ್ರಗಳಿಗೆ ಗಣ್ಯರಿಂದ ಪುಷ್ಪಾರ್ಚಣೆ ಮಾಡಲಾಯಿತು.



ಕಾರ್ಯಕ್ರಮದಲ್ಲಿ ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ ಅಧ್ಯಕ್ಷ ರಾಜೇಶ ಕೋಟೆನ್ನರವರು, ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳದ ಅಧ್ಯಕ್ಷ ಜಿ.ಪಿ. ಪಾಟೀಲ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಉಪಾಧ್ಯಕ್ಷ ಜಗದೀಶ ಕವಟಗಿಮಠ, ನಿರ್ದೇಶಕರಾದ ಬಸವರಾಜ ಅರಬಗೊಂಡ, ಈರಣ್ಣ ಪಟ್ಟಣಶಟ್ಟಿ, ಬಾಪುಗೌಡ ಡಿ. ಪಾಟೀಲ, ಯೂನಿಯನ್ ಅಧ್ಯಕ್ಷರಾದ ಶಂಕರಪ್ಪ ಎನ್. ರಾಯನಾಳ, ಕೆ.ಸಿ.ಸಿ. ಬ್ಯಾಂಕ ಅಧ್ಯಕ್ಷರಾದ ಮಲ್ಲಿಕಾರ್ಜುನ ಹೊರಕೇರಿ, ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಎಸ್. ಅರಳಿ ಸೂರ್ಯಕಾತ, ಸಹಕಾರ ಸಂಘಗಳ ಉಪನಿಬಂಧಕರಾದ ರಂಜನಾ ಪೋಳ, ಡಾ. ಕೆ.ಎಂ. ಲೋಹಿತೇಶ್ವರ, ನೀಲಕಂಠಪ್ಪ ಅಸೂಟಿ, ಹನಮಂತಗೌಡ ಹಿರೇಗೌಡ್ರ, ಸೂರ್ಯಚಂದ್ರ ಹೆಗಡೆ, ಮಂಜುನಾಥಗೌಡ ಪಾಟೀಲ, ಸುರೇಶ ಬಣವಿ, ಗೀತಾ ಮರಲಿಂಗಣ್ಣವರ, ಪರಸುರಾಮ ನಯ್ಕಿ, ಮಹಾಮಂಡಳದ ಸಹಕಾರ ಶಿಕ್ಷಣಾಧಿಕಾರಿಗಳಾದ ಕೆ. ಮಲ್ಲಯ್ಯ, ಡಿ.ಆರ್. ವೆಂಕಟರಾಮ ಮತ್ತು ಎಸ್.ವಿ. ಹಿರೇಮಠ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಹಾಲು ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಸಿ. ಸತೀಶ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಧಾರವಾಡ ಸಹಕಾರ ಹಾಲು ಒಕ್ಕೂಟದ ಅಧ್ಯಕ್ಷರಾದ ಶಂಕರ ವ್ಹಿ. ಮುಗದ ಅವರು ಸರ್ವರನ್ನು ಸ್ವಾಗತಿಸಿದರು.



## ಸೇಡಂನಲ್ಲಿ 69ನೇ ಅಖಿಲ ಭಾರತ ಸಹಕಾರ ಸಪ್ತಾಹ ಉದ್ಘಾಟನೆ

# ಸಹಕಾರ ಕ್ಷೇತ್ರ ಸರ್ವಸ್ಪರ್ಶ,ಸರ್ವವ್ಯಾಪಿ : ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

**ಕಲಬುರಗಿ :** ಪ್ರತಿಯೊಬ್ಬರ ಬದುಕಿನಲ್ಲಿ ಹಾಸು ಹೊಕ್ಕಾಗಿರುವ ಸಹಕಾರದ ಗುಣಧರ್ಮ ರಾಜ್ಯದ ಆರ್ಥಿಕ, ಸಾಮಾಜಿಕ, ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಸೇರಿ ಎಲ್ಲಾ ರಂಗಗಳಲ್ಲಿ ಬೆಳವಣಿಗೆ ಸಾಧಿಸಿ ಸರ್ವಸ್ಪರ್ಶಿ, ಸರ್ವವ್ಯಾಪಿಯಾಗಿ ವಿಸ್ತಾರಗೊಳ್ಳಬೇಕು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಕಲಬುರಗಿ-ಯಾದಗಿರಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನೇತೃತ್ವದಲ್ಲಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಕೈಗಾರಿಕಾ ಮಹಾಮಂಡಳ, ಹಾಪ್‌ಕಾಮ್ಸ್, ಕಲಬುರಗಿ ಜಿಲ್ಲಾ ಸಹಕಾರ ಯೂನಿಯನ್, ಕಲಬುರಗಿ ಪ್ರಾಂತ್ಯದ ವಿವಿಧ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖೆ ಸಹಯೋಗದಲ್ಲಿ ಕಲಬುರಗಿ ಜಿಲ್ಲೆಯ ಸೇಡಂ ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 69ನೇ ಅಖಿಲ ಭಾರತ ಸಹಕಾರ ಸಪ್ತಾಹ-2022ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಚ್ಚುವ ಸ್ಥಿತಿಯಲ್ಲಿದ್ದ ಕಲಬುರಗಿ-ಯಾದಗಿರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕನ್ನು ಮೇಲೆತ್ತಿ 1012 ಕೋಟಿ ರೂಪಾಯಿ ಸಾಲ ನೀಡುವ ಮೂಲಕ ಸುಸ್ಥಿತಿಗೆ ತಂದಿದ್ದಾರೆ ಎಂದು ಹೇಳುವ ಮೂಲಕ ಕಲಬುರಗಿ-ಯಾದಗಿರಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ನ ಅಧ್ಯಕ್ಷ ರಾಜಕುಮಾರ್ ಪಾಟೀಲ್ ತೇಲ್ಕೂರ ಅವರನ್ನು ಮುಖ್ಯಮಂತ್ರಿಗಳು ಶ್ಲಾಘಿಸಿದರು.

ರೈತರ ಮಕ್ಕಳಿಗೆ ನೀಡುವ ವಿದ್ಯಾನಿಧಿ ಯೋಜನೆ ಮಹತ್ವದ್ದು. ನಾನು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಕೇವಲ 4 ಗಂಟೆಯಲ್ಲಿ ಜಾರಿಗೆ ತಂದಿದ್ದೇನೆ ಎಂದು ಹೇಳಿದ ಅವರು, ವಿದ್ಯಾನಿಧಿಯಿಂದ ರೈತರ ಮಕ್ಕಳು ಉನ್ನತ ವ್ಯಾಸಂಗಕ್ಕೆ ಅನುಕೂಲವಾಗಿದೆ ಎಂದು ಹೇಳಿದರು.

45 ಕೋಟಿ ರೂಪಾಯಿ ವೆಚ್ಚದಲ್ಲಿ ರಾಜ್ಯದ ಎಲ್ಲ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಡಿಜಿಟಲೀಕರಣಗೊಳಿಸುತ್ತಿದೆ. ಈ ಮೂಲಕ ರೈತರ ಖಾತೆಗೆ ನೇರವಾಗಿ ಹಣ ತಲುಪಲಿದೆ. ಮುಂದಿನ ದಿನಗಳಲ್ಲಿ ಸಹಕಾರ ರಂಗ ಇತರ ರಂಗಗಳಿಗಿಂತ ಮಂಚೂಣಿಯಲ್ಲಿರಬೇಕು. ಸರ್ವ-ಸ್ಪರ್ಶಿ-ಸರ್ವ ವ್ಯಾಪಿಯಾಗಿರಬೇಕು ಎಂದು ಅವರು ಪ್ರತಿಪಾದಿಸಿದರು.

13 ಜನರಿಗೆ ಸಹಕಾರ ರತ್ನ ಪ್ರಶಸ್ತಿ ಪ್ರದಾನ : 69ನೇ ಅಖಿಲ ಭಾರತ ಸಹಕಾರ ಸಪ್ತಾಹದ ಉದ್ಘಾಟನಾ ಸಮಾರಂಭದಲ್ಲಿ ಕಲ್ಯಾಣ ಕರ್ನಾಟಕ ಭಾಗದ 13 ಸಹಕಾರಿ ಧುರೀಣರಿಗೆ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಮಾರಂಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಕಲಬುರಗಿ-ಯಾದಗಿರಿ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ಅಧ್ಯಕ್ಷರಾದ ರಾಜಕುಮಾರ ಪಾಟೀಲ್ ತೇಲ್ಕೂರ ಸೇರಿದಂತೆ 13 ಗಣ್ಯರಿಗೆ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಿದರು.

### ಯಶಸ್ವಿನಿ ಯೋಜನೆ :

ಯಶಸ್ವಿನಿ ಯೋಜನೆ ಬಡವರಿಗೆ ಅನುಕೂಲಕರ ಯೋಜನೆಯಾಗಿದ್ದು, ಮತ್ತೆ ಈ ಯೋಜನೆ ಜಾರಿ ಮಾಡಬೇಕೆಂದು ಬಡಜನತೆ ಒತ್ತಾಯಿಸಿದ್ದರಿಂದ ಕಳೆದ ಬಜೆಟ್‌ನಲ್ಲಿ 300 ಕೋಟಿ ರೂಪಾಯಿ ಮೀಸಲಿರಿಸಲಾಗಿದೆ. ಹೃದ್ರೋಗ, ಕಿಡ್ನಿ, ಕರುಳು ಬೇನೆ, ಕ್ಯಾನ್ಸರ್ ಮುಂತಾದ ರೋಗಗಳಿಗೆ ಆಸ್ಪತ್ರೆಗಳಲ್ಲಿ ನೇರವಾಗಿ ಚಿಕಿತ್ಸೆ ದೊರೆಯಲಿದೆ ಎಂದು ಯಶಸ್ವಿನಿ ಯೋಜನೆಯ ಮಹತ್ವ ಹೇಳಿದರು.

